EMAIL : dairyadadaari@gmail.com ಸಂಪುಟ: 01 ಸಂಚಿಕೆ: 114

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 10-04-2026


## ಬೇಸಿಗೆ ಬಿಸಿ ತೀವ್ರತೆ: ಜನರು ಎಚ್ಚರಿಕೆಯಿಂದ ಇರಲು ಸೂಚನೆ

ಧೈರ್ಯದ ದಾರಿ

**ಮುಖ್ಯಾಂಶಗಳು**

*ಬೇಸಿಗೆ ತಾಪಮಾನ ಏರಿಕೆ: ಆರೋಗ್ಯ ಇಲಾಖೆ ಎಚ್ಚರಿಕೆ
*ಮಧ್ಯಾಹ್ನ 1–4 ಗಂಟೆ ಹೊರಗೆ ಹೋಗಬೇಡಿ
*ನಿರ್ಜಲೀಕರಣ ಭೀತಿ: ಹೆಚ್ಚು ನೀರು ಕುಡಿಯಿರಿ
*ಓಆರ್‌ಎಸ್ ಬಳಕೆ ಕಡ್ಡಾಯ ಇಲಾಖೆ ಸಲಹೆ
*ಮಕ್ಕಳು, ವೃದ್ಧರಿಗೆ ವಿಶೇಷ ಕಾಳಜಿ ಅಗತ್ಯ
*ಬಿಸಿಲಿನಲ್ಲಿ ವಾಹನ ಮುಟ್ಟಬೇಡಿ ಮಕ್ಕಳಿಗೆ ಎಚ್ಚರಿಕೆ
*ರಸ್ತೆಬದಿ ಆಹಾರ ಸೇವನೆ ತಪ್ಪಿಸಿ
*ಶುದ್ಧ ನೀರು ಮಾತ್ರ ಕುಡಿಯಿರಿ
*ವಾಂತಿ–ಬೇಧಿ ಪ್ರಕರಣಗಳ ಭೀತಿ
*ಹತ್ತಿ ಬಟ್ಟೆ, ಛತ್ರಿ ಬಳಕೆ ಮಾಡಿರಿ
*ಲಿಂಬು ಪಾನಕ, ಮಜ್ಜಿಗೆ ಸೇವನೆ ಹೆಚ್ಚಿಸಿ
*ತುರ್ತು ವೇಳೆ 108 ಕರೆ ಮಾಡಿ



**ರಾಯಚೂರು:** ಪ್ರಸ್ತುತ ಜಿಲ್ಲೆಯಲ್ಲಿ ಬೇಸಿಗೆ ಕಾಲ ಆರಂಭವಾಗಿದೆ. ಈ ಅವಧಿಯಲ್ಲಿ ಅತಿಯಾದ ಉಷ್ಣಾಂಶದಿಂದ ನಾನಾ ರೀತಿಯ ಅನಾರೋಗ್ಯ ಪರಿಸ್ಥಿತಿಗಳು ಸಂಭವಿಸುವ ಸಾಧ್ಯತೆಗಳಿವೆ. ಹೀಗಾಗಿ ಜಿಲ್ಲಾ ಆರೋಗ್ಯ ಇಲಾಖೆಯಿಂದ ಸಲಹೆಗಳನ್ನು ನೀಡಲಾಗುತ್ತಿದ್ದು, ಅವುಗಳನ್ನು ಸರಿಯಾಗಿ ಪಾಲಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಕೋರಿದ್ದಾರೆ.

ಪ್ರಸ್ತುತ ವರ್ಷದ ಬೇಸಿಗೆಯು ಪ್ರಖರವಾಗಿರುವ ಸಾಧ್ಯತೆಗಳ ಬಗ್ಗೆ ವರದಿ ಹಿನ್ನಲೆಯಲ್ಲಿ ಮುಖ್ಯವಾಗಿ ಚಿಕ್ಕ ಮಕ್ಕಳು, ಗರ್ಭಿಣಿ, ಬಾಣಂತಿಯರು, ವಯೊವೃದ್ದರ ಕಾಳಜಿಗಾಗಿ ಕುಟುಂಬದ ಸದಸ್ಯರು ಹೆಚ್ಚಿನ ಆಧ್ಯತೆ ನೀಡಬೇಕು. ಬಿಸಿಲಿನ ಪ್ರಖರತೆ ಹೆಚ್ಚಿರುವ ಮಧ್ಯಾಹ್ನ 1 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಹೆಚ್ಚು ಜಾಗರೂಕರಾಗಿರಬೇಕು.

ಹೆರಿಗೆ ನಂತರ ಬಾಣಂತಿಯರು ನವಜಾತ ಶಿಶುವಿಗೆ ಮೇಲಿಂದ ಮೇಲೆ ಎದೆ ಹಾಲುಣಿಸುವ ಮೂಲಕ ಶಿಶುವಿನಲ್ಲಾಗುವ ನಿರ್ಜಲೀಕರಣ ತಡೆಯಲು ಸಹಕಾರಿಯಾಗುವುದು. ರೋಗ ನಿರೋಧಕ ಶಕ್ತಿ ವೃದ್ದಿಸಲು 12 ಮಾರಕ ರೋಗಗಳ ವಿರುದ್ಧ ಲಸಿಕೆ ಹಾಕಿಸಲು ಮರೆಯಬಾರದು. ಪ್ರಖರ ಬಿಸಿಲಿನ ಅವಧಿಯಲ್ಲಿ ಆದಷ್ಟು ಮನೆಯ ಹೊರಗೆ ಹೋಗದಂತೆ ಮುತವರ್ಜಿ ವಹಿಸಿ. ಮನೆಯ ಒಳಗೆ ಅಥವಾ ನೆರಳು ಇರುವ ಸ್ಥಳದಲ್ಲಿ ವಿಶ್ರಾಂತಿ ಪಡೆಯಬೇಕಿದೆ. ಆದಷ್ಟು ಮಸಾಲೆಯುಕ್ತ ಪದಾರ್ಥಗಳ ಸೇವನೆ ಕಡಿಮೆ ಮಾಡಬೇಕು. ಅಧಿಕ ಬಿಸಿಲಿರುವ ಸಮಯದಲ್ಲಿ ಮನೆಯ ಹೊರಗೆ ಹೋಗದಿರಲು ಯೋಚಿಸಿ, ದೈನಂದಿನವಾಗಿ ತೆಗೆದುಕೊಳ್ಳುವ ಮಾತ್ರೆಗಳನ್ನು ಜೊತೆಯಲ್ಲಿರಿಸಿಕೊಳ್ಳಿ, ದ್ರವ ಆಹಾರ ಹೆಚ್ಚು ಸೇವಿಸಬೇಕು.

ಆಟವಾಡುವ ಮಕ್ಕಳು ಬಿಸಿಲಿನಲ್ಲಿ ನಿಲ್ಲಿಸಿರುವ ವಾಹನ ಮುಟ್ಟದಂತೆ ಜಾಗೃತಿ ವಹಿಸಬೇಕು. ಮಕ್ಕಳು ಅಸುರಕ್ಷಿತ ಆಹಾರ, ಪಾನೀಯ ಸೇವಿಸದಂತೆ ನಿಗಾವಹಿಸಿ.

**ಓಆರ್‌ಎಸ್ ಬಳಕೆಗೆ ಆಧ್ಯತೆ ನೀಡಿ:** ನಿರ್ಜಲಿಕರಿಣದಿಂದ ದೇಹದ ನೀರಿನ ಅಂಶದ ಜೊತೆಗೆ ಲವಣಾಂಶ ಕಡಿಮೆಯಾಗದಂತೆ ಓಆರ್‌ಎಸ್ ಜೀವಜಲ ಪ್ಯಾಕೇಟ್ ಸದಾ ಮನೆಯಲ್ಲಿರಲಿ. ಒಂದು ಲೀಟರ್ ನೀರಿಗೆ ಪ್ಯಾಕೇಟ್ ಸಂಪೂರ್ಣ ಪುಡಿ ಹಾಕಿ ದ್ರಾವಣ ಸಿದ್ದಪಡಿಸಿ 24 ಗಂಟೆಯೊಳಗೆ ಬಳಸಬೇಕು. ಇದಲ್ಲದೆ ಲಿಂಬೂ ಪಾನಕ, ಎಳೆನೀರು, ಮಜ್ಜಿಗೆ ಕುಡಿಯಬಹುದು. ಆಹಾರದಲ್ಲಿ ಬೇಳೆ ತಿಳಿ ಬಳಸಿ, ಅಲ್ಲದೆ ಮುಂಜಾಗ್ರತವಾಗಿ ಜಿಲ್ಲಾ ಎನ್‌ಪೋರ್ಸಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಜಿಲ್ಲಾ ವಿಪತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗಸೂಚಿಯನ್ವಯ ಆರೋಗ್ಯ ಇಲಾಖೆ ಸಿಬ್ಬಂದಿ ಎಲ್ಲ ಆಸ್ಪತ್ರೆಯ ಬರುವ ಜನತೆಗೆ ಗ್ರಾಮಗಳಲ್ಲಿ ಹತ್ತಿ ಉಡುಪು ಬಳಕೆ, ಛತ್ರಿ ಜೊತೆಯಲ್ಲಿ ನೀರು ಇರುವಂತೆ ಸಾರ್ವಜನಿಕರಿಗೆ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ.

ವಾಂತಿ ಬೇಧಿ ತಡೆ: ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ದೀಕರಿಸಿದ ನೀರು ಅಥವಾ ನೀರು ಶುದ್ದೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು. ಅಲ್ಲದೆ ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಬೇಕು. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಸೇವಿಸಬಾರದು, ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಇದಕ್ಕಾಗಿ ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್ ಕೆ. ನೇತೃತ್ವದಲ್ಲಿ ಅಗತ್ಯ ಜಾಗೃತಿ ನೀಡಲಾಗುತ್ತಿದೆ. ಅಲ್ಲದೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಮುಂಜಾಗ್ರತಾ ಔಷಧಿಗಳು ಲಭ್ಯವಿವೆ. ಯಾವುದೇ ತುರ್ತು ಸಂದರ್ಭದಲ್ಲಿ 108ಕ್ಕೆ ಕರೆ ಮಾಡಿ ಆಂಬ್ಯುಲೆನ್ಸ್ ಸದುಪಯೋಗ ಪಡೆಯಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ವಿತೀಯ ಪಿಯುಸಿ ದಾಖಲೆ ಫಲಿತಾಂಶ ;ಶೇ.86.48ರಷ್ಟು ಪಾಸ್ ಬಾಲಕಿಯರೇ ಮೇಲುಗೈ



ಸಂಗೀತಾ, ದಿಶಾ, ಅರ್ಚನಾ

**ಬೆಂಗಳೂರು,ಏ.9**–ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ 5,46,698 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಕರ್ನಾಟಕದಲ್ಲಿ ಮೊದಲ ಬಾರಿಗೆ ಶೇ.86.48ರಷ್ಟು ದಾಖಲೆಯ ಫಲಿತಾಂಶ ಬಂದಿದೆ.

ನಗರದಲ್ಲಿ ಗುರುವಾರ ಸಂಜೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 6,32,200 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು, 5,46,698 ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಈ ಪೈಕಿ 2,32,928 ( 83.65%) ಬಾಲಕರು, 3,13,770 (88.70%) ಬಾಲಕಿಯರು ಉತ್ತೀರ್ಣರಾಗಿದ್ದು, ಈ ಬಾರಿಯೂ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ ಎಂದರು.

ದಾಖಲೆಯ ಫಲಿತಾಂಶ ಪ್ರಕಟವಾದ ಇದು ಐತಿಹಾಸಿಕ ದಿನವಾಗಿದೆ, ಮೊದಲು ಮಕ್ಕಳಿಗೆ ಧನ್ಯವಾದ ಹೇಳುತ್ತೇನೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹರ್ಷ ವ್ಯಕ್ತಪಡಿಸಿದರು. ಕಲಾ ವಿಭಾಗದಲ್ಲಿ 98,310 (72.86%) ವಿದ್ಯಾರ್ಥಿಗಳು, ವಾಣಿಜ್ಯ ವಿಭಾಗದಲ್ಲಿ 1,82,317(88.04%) ವಿದ್ಯಾರ್ಥಿಗಳು ಹಾಗೂ ವಿಜ್ಞಾನ ವಿಭಾಗದಲ್ಲಿ 2,66,071( 86.48%) ಉತ್ತೀರ್ಣರಾಗಿದ್ದಾರೆ. ಈ ಪೈಕಿ ನಗರ ವಿಭಾಗದಲ್ಲಿ 3,71,853 (85.95%) ಮಕ್ಕಳು, ಗ್ರಾಮೀಣ ವಿಭಾಗದ 1,74,845 (87.62%) ಮಕ್ಕಳು ಉತ್ತೀರ್ಣರಾಗಿದ್ದಾರೆ.

ಉನ್ನತ ಶ್ರೇಣಿಯಲ್ಲಿ 1,70,529 ಮಕ್ಕಳು, ಪ್ರಥಮ ದರ್ಜೆಯಲ್ಲಿ 2,95,385 ಮಕ್ಕಳು, ದ್ವಿತಿಯ ದರ್ಜೆಯಲ್ಲಿ 63,957 ಮಕ್ಕಳು ಉತ್ತೀರ್ಣರಾಗಿದ್ದು, 16,827 ಮಕ್ಕಳು ಜಸ್ಟ್ ಪಾಸ್ ಆಗಿದ್ದಾರೆ ಎಂದು ಮಾಹಿತಿ ನೀಡಿದರು.ಇನ್ನೂ 5,577 ವಿದ್ಯಾರ್ಥಿಗಳು 35% ನಿಂದ 33% ಪಾಸಿಂಗ್ ಅಂಕದಿಂದ ಪಾಸ್ ಆಗಿದ್ದಾರೆ. ಮಕ್ಕಳಿಗೆ ಫಲಿತಾಂಶ ಮೊದಲು ಕೊಡಬೇಕು ಎಂದು ವೆಬ್‌ಸೈಟ್‌ನಲ್ಲಿ ಫಲಿತಾಂಶ ಪ್ರಕಟ ಮಾಡಿದ್ದೇವೆ. ಅಂಕಪಟ್ಟಿ ಕೂಡ ಇಂದೇ ಲಭ್ಯವಾಗಿದೆ. ಡಿಜಿ ಲಾಕರ್‌ನಲ್ಲೂ ಅಂಕಪಟ್ಟಿ ಸಿಗಲಿದೆ.

ಈ ವರ್ಷ ಶೇ.86ರಷ್ಟು ಮಕ್ಕಳು ಉತ್ತೀರ್ಣರಾಗಿದ್ದಾರೆ. ಅಂದರೆ 7,10,363 ವಿದ್ಯಾರ್ಥಿಗಳ ಪೈಕಿ 6.10 ಲಕ್ಷ ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕಳೆದ ವರ್ಷ ಶೇ.73.45ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದರು. ಇದರೊಂದಿಗೆ ಈ ಬಾರಿ ಪಿಯುಸಿ ಫಲಿತಾಂಶದಲ್ಲಿ ಭಾರೀ ಸುಧಾರಣೆ ಕಂಡು ಬಂದಿದೆ.

**590ಕ್ಕಿಂತ ಅಧಿಕ ಅಂಕ:** ವಾಣಿಜ್ಯ ವಿಭಾಗದಲ್ಲಿ 9 ವಿದ್ಯಾರ್ಥಿಗಳು 590ಕ್ಕಿಂತ ಅಧಿಕ ಅಂಕ ಗಳಿಸಿದ್ದಾರೆ. ಒಂದೇ ಕಾಲೇಜಿನ 9 ವಿದ್ಯಾರ್ಥಿಗಳು ವಾಣಿಜ್ಯ ವಿಭಾಗದಲ್ಲಿ ಈ ಸಾಧನೆ ಮಾಡಿದ್ದಾರೆ. ರಾಜಾಜಿನಗರದ ಎಎಸ್ ಸಿ ಕಾಲೇಜಿನ 9 ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಿದ್ದಾರೆ.

ಈ ಬಾರಿಯ ಪಿಯುಸಿ ಫಲಿತಾಂಶದಲ್ಲಿ 2ನೇಪುಟಕ್ಕೆ

## ಸರ್ವೋದಯ ಪಿಯು ಕಾಲೇಜ್ ಮಾನ್ವಿಯಲ್ಲಿ ಭರ್ಜರಿ ಫಲಿತಾಂಶ

### ಡಿಸ್ಟಿಂಕ್ಷನ್‌ನಲ್ಲಿ 30 ವಿದ್ಯಾರ್ಥಿಗಳು । ಪ್ರಥಮ ದರ್ಜೆಯಲ್ಲಿ 66 । ದ್ವಿತೀಯ ದರ್ಜೆಯಲ್ಲಿ 13

ಧೈರ್ಯದ ದಾರಿ

**ಮಾನ್ವಿ:** ಸರ್ವೋದಯ ಪಿಯು ಕಾಲೇಜ್ ಮಾನ್ವಿ ಈ ವರ್ಷದ ಪಿಯು ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿ ಗಮನ ಸೆಳೆದಿದೆ. ಕಾಲೇಜಿನ ವಿದ್ಯಾರ್ಥಿಗಳು ಉನ್ನತ ಅಂಕಗಳೊಂದಿಗೆ ಉತ್ತೀರ್ಣರಾಗಿದ್ದು, ಒಟ್ಟು 30 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 66 ವಿದ್ಯಾರ್ಥಿಗಳು ಪ್ರಥಮ ದರ್ಜೆ, ಮತ್ತು 13 ವಿದ್ಯಾರ್ಥಿಗಳು ದ್ವಿತೀಯ ದರ್ಜೆ ಪಡೆದು ಕಾಲೇಜಿನ ಗೌರವವನ್ನು ಹೆಚ್ಚಿಸಿದ್ದಾರೆ. ಈ ಬಾರಿ ಕಾಲೇಜಿನ ಟಾಪರ್‌ಗಳು ಅತ್ಯುನ್ನತ ಶೇಕಡಾವಾರು ಅಂಕಗಳನ್ನು ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ.


ಟಾಪರ್‌ಗಳ ವಿವರ:
ಮಾಯನ ಅಂಜುಮ್ –581 (96.8%)
ವೇದಾವತಿ (ತಂದೆ: ರಾಜಶೇಖರ್) – 580 (96.6%)
ಪ್ರಿಯಾಂಕ (ತಂದೆ: ನಿಂಗಪ್ಪ) – 579 (96.5%)
ಕೈಸರ್ (ತಂದೆ: ಸೆಕ್ಸಾವಲಿ) – 575 (95.8%)
ಸಿಂಧೂ ಎನ್. (ತಂದೆ: ನೂರುಸ) – 570 (95%)
ರಾಜು (ತಂದೆ: ಸಾಬಣ್ಣ) – 569 (94.8%)
ಯಶ್ವಂತ್ (ತಂದೆ: ಅಮರೇಶ್) – 568 (94.6%)
ಎಂ.ಡಿ. ಮಕ್ಸುದ್ (ತಂದೆ: ಎಂ.ಡಿ. ಮೊಹಮ್ಮದ್) 566 (94%)

ವಿದ್ಯಾರ್ಥಿಗಳ ಈ ಸಾಧನೆಗೆ ಪೋಷಕರು, ಉಪನ್ಯಾಸಕರು ಮತ್ತು ಕಾಲೇಜಿನ ಆಡಳಿತ ಮಂಡಳಿ ಸಂತೋಷ ವ್ಯಕ್ತಪಡಿಸಿದ್ದಾರೆ.

**ಆಡಳಿತ ಮಂಡಳಿಯ ಅಭಿಪ್ರಾಯ:**
**"ನಮ್ಮ ವಿದ್ಯಾರ್ಥಿಗಳ ಪರಿಶ್ರಮ ಮತ್ತು ಉಪನ್ಯಾಸಕರ ಸಮರ್ಪಣೆಯ ಫಲವೇ ಈ ಸಾಧನೆ. ಮುಂದಿನ ವರ್ಷಗಳಲ್ಲಿ ಇನ್ನಷ್ಟು ಉತ್ತಮ ಫಲಿತಾಂಶಗಳನ್ನು ತರುವ ನಿಟ್ಟಿನಲ್ಲಿ ನಾವು ಶ್ರಮಿಸುತ್ತೇವೆ." – ಕಾಲೇಜ್ ನಿರ್ವಹಣಾ ಮಂಡಳಿ**

ನಮ್ಮ ಮಗಳು ತಾಲೂಕು ಮಟ್ಟದಲ್ಲಿಯೇ ಅತ್ಯುತ್ತಮ ಅಂಕಗಳನ್ನು ಗಳಿಸಿದ್ದಕ್ಕೆ ತುಂಬಾ ಸಂತೋಷವಾಗಿದೆ. ಕಾಲೇಜಿನ ಉಪನ್ಯಾಸಕರ ಮಾರ್ಗದರ್ಶನ ಬಹಳ ಉತ್ತಮವಾಗಿದ್ದರಿಂದಲೇ ಈ ಸಾಧನೆ ಮಾಡಲು ಸಾಧ್ಯವಾಯಿತು."–ಮೊಹಮ್ಮದ್ ಯೂಸುಫ್ (ಟಾಪರ್ ಮಾಯನ ಅಂಜುಮ್ ತಂದೆ)

### ತಾಲೂಕಿಗೆ ಕೀರ್ತಿ ತಂದ ಟಾಪರ್ ಮಾಯನ್ ಅಂಜುಮ್:



ಈ ವರ್ಷದ ಫಲಿತಾಂಶದ ಪ್ರಮುಖ ಆಕರ್ಷಣೆಯಾಗಿ ಕಾಲೇಜಿನ ಪ್ರತಿಭಾವಂತ ವಿದ್ಯಾರ್ಥಿನಿ ಮಾಯನ ಅಂಜುಮ್ (ತಂದೆ. ಮೊಹಮ್ಮದ್ ಯೂಸುಫ್) ಹೊರಹೊಮ್ಮಿದ್ದಾರೆ. ಒಟ್ಟು 600 ಅಂಕಗಳಿಗೆ 581 ಅಂಕಗಳನ್ನು (96.8%) ಪಡೆಯುವ ಮೂಲಕ ತಾಲೂಕು ಮಟ್ಟದಲ್ಲಿಯೇ ಪ್ರಥಮ ಸ್ಥಾನ ಗಳಿಸಿ ಕಾಲೇಜಿನ ಹಾಗೂ ಪೋಷಕರ ಕೀರ್ತಿಯನ್ನು ಪತಾಕೆಯಂತೆ ಹಾರಿಸಿದ್ದಾರೆ. ಇವರ ಈ ಅಸಾಧಾರಣ ಸಾಧನೆ ಮುಂಬರುವ ವಿದ್ಯಾರ್ಥಿಗಳಿಗೆ ಬಹುದೊಡ್ಡ ಪ್ರೇರಣೆಯಾಗಿದ್ದು, ಸರ್ವೋದಯ ಕಾಲೇಜಿನ ಇತಿಹಾಸದಲ್ಲಿ ಮತ್ತೊಂದು ಸುವರ್ಣ ಮೈಲುಗಲ್ಲಾಗಿ ದಾಖಲಾಗಿದೆ.

## ಲೊಯೋಲ ಪದವಿ ಕಾಲೇಜಿನಲ್ಲಿ ಸಾಂಸ್ಕೃತಿಕ ವೈಭವ: ನಾರ್ಮನ್ ಲೆಸ್ಲೀ ಡಾಸ್



**ಮಾನ್ವಿ:** ಪಟ್ಟಣದ ಲೊಯೋಲ ಪದವಿ ಕಾಲೇಜಿನಲ್ಲಿ ನಡೆದ ಸಾಂಸ್ಕೃತಿಕ ವೈಭವ ಕಾರ್ಯಕ್ರಮವನ್ನು ಬೆಂಗಳೂರಿನ ಸಂತ ಜೋಸೆಫ್ ವಿಶ್ವವಿದ್ಯಾಲಯದ ರಂಗಭೂಮಿ ತರಬೇತಿದಾರರಾದ ನಾರ್ಮನ್ ಲೆಸ್ಲೀ ಡಾಸ್ ಉದ್ಘಾಟಿಸಿ ಮಾತನಾಡಿ ನಮ್ಮ ದೇಶವು ವೈವಿಧ್ಯಮಯವಾದ ಸಂಸ್ಕೃತಿ, ಪರಂಪರೆ, ಕಲೆ, ಜಾನಪದ ಕಲೆಗಳು, ಹಬ್ಬಗಳು ಮತ್ತು ಸಂಪ್ರದಾಯಗಳನ್ನು ಒಳಗೊಂಡಿದ್ದು ಅವುಗಳ ಬಗ್ಗೆ ತಿಳಿದುಕೊಳ್ಳುವುದಕ್ಕೆ ರಂಗಭೂಮಿ ಉತ್ತಮವಾದ ಅವಕಾಶವನ್ನು ಒದಗಿಸುತ್ತದೆ ಪ್ರತಿಯೊಬ್ಬ ಕಲಾವಿದ ಪ್ರೇಕ್ಷಕನ ಮನಸ್ಸಿನಲ್ಲಿ ವೈಚಾರಿಕತೆಯ ಬೆಳಕನ್ನು ಮೂಡಿಸುವ ದಾರಿಯಾಗಲಿ ದೀಪದಿಂದ ದೀಪವನ್ನು ಹಚ್ಚುವಂತೆ, ಸಂಸ್ಕೃತಿಯಿಂದ ಸಂಸ್ಕಾರವನ್ನು ಹಚ್ಚೋಣ ವಿದ್ಯಾರ್ಥಿಗಳು ಹೆಚ್ಚಾಗಿ ನಾಟಕಗಳಲ್ಲಿ ಅಭಿನಾಯಿಸುವುದರಿಂದ ವೇದಿಕೆಯ ಭಯವನ್ನು ಒಗಲಾಡಿಸುವುದಕ್ಕೆ ಸಾಧ್ಯವಾಗುತ್ತದೆ ಹಾಡುಗಾರಿಕೆ, ನೃತ್ಯ, ನಾಟಕ ಅಥವಾ ಚಿತ್ರಕಲೆಯಂತಹ ಸ್ಪರ್ಧೆಗಳು ವಿದ್ಯಾರ್ಥಿಗಳನ್ನು ಪರಿಪೂರ್ಣ ವ್ಯಕ್ತಿತ್ವವುಳ್ಳ ನಾಗರಿಕರನ್ನಾಗಿ ರೂಪಿಸಲು ನೇರವಾಗುತ್ತವೆ ಎಂದು ತಿಳಿಸಿದರು.

ಲೊಯೋಲ ಪದವಿ ಕಾಲೇಜಿನ ಪ್ರಾಂಶುಪಾಲರಾದ ಫಾದರ್ ವಿನೋದ್ ಪೌಲ್ ಮಾತನಾಡಿ ಸಾಂಸ್ಕೃತಿಕ ಚಟುವಟಿಕೆಗಳು ಪಠ್ಯದಷ್ಟೇ ಮುಖ್ಯವಾಗಿದ್ದು, ಅವು ವಿದ್ಯಾರ್ಥಿಗಳ ಬೌದ್ಧಿಕ ಮತ್ತು ಭಾವನಾತ್ಮಕ ಬೆಳವಣಿಗೆಯ ನಡುವೆ ಸಮತೋಲನ ಸಾಧಿಸುವುದಕ್ಕೆ ಸಹಾಯಕವಾಗಿರುತ್ತವೆ ಎಂದು ಹೇಳಿದರು.

ಕಾಲೇಜಿನ ಉಪಪ್ರಾಂಶುಪಾಲರಾದ ಖಾಸಿಂಸಾಬ್, ಸಾಂಸ್ಕೃತಿಕ ವೈಭವ ಕಾರ್ಯಕ್ರಮದ ಮುಖ್ಯ ಸಂಯೋಜಕರಾದ ಸಂಧ್ಯಾ, ಜೋಯೆಲ್ ಜೋಸೆಫ್,ಮೈನುದ್ದಿನ್,ಲೋರೆಟಾ ,ಸ್ಮಿತಾ ,ಶ್ರೀರಕ್ಷಿತಾ ಸೇರಿದಂತೆ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಸಂಭ್ರಮದಿಂದ ಬಸವ ಜಯಂತಿ ಆಚರಣೆ; ಎಡಿಸಿ ಶಿವಾನಂದ



ಧೈರ್ಯದ ದಾರಿ

**ರಾಯಚೂರು:** ಜಿಲ್ಲಾಡಳಿತದಿಂದ ಕರ್ನಾಟಕದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಏಪ್ರಿಲ್ 20ರಂದು ಸಂಭ್ರಮದಿಂದ ಆಚರಿಸಲಾಗುವುದು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಅವರು ತಿಳಿಸಿದರು.ಏಪ್ರಿಲ್ 09ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಬಸವಣ್ಣ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಅಂದು ಬೆಳಿಗ್ಗೆ 9ಗಂಟೆಗೆ ನಗರದ ಬಸವೇಶ್ವರ ವೃತ್ತದಲ್ಲಿ ಬಸವಣ್ಣನವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ನಂತರ ಬೆಳಿಗ್ಗೆ 11ಕ್ಕೆ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯ ಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ–ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಸಾರ್ವಜನಿಕರಲ್ಲಿ ಮನವಿ ಮಾಡಿದರು.ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ, ಸಮಾಜದ ಮುಖಂಡರಾದ ಶಿವಾನಂದ ಚೌಕಿ, ಚಂದ್ರಶೇಖರ ಪಾಟೀಲ ಮಿರ್ಜಾಪುರ, ಪರಮೇಶ್ವರ ಸಾಲಿಮಠ, ನಾಗೇಶ್ವರಪ್ಪ, ಬಸವರಾಜ, ಚೆನ್ನಬಸವಣ್ಣ, ಜೆ.ಬಸವರಾಜ, ಆನಂದ ಪಾಟೀಲ, ಕಲ್ಲಯ್ಯ ಸ್ವಾಮಿ, ವೀರಪ್ಪಣ್ಣ ಗೌಡ ಬಂಡಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಇದ್ದರು.

ಮೊದಲನೇ ಪುಟದಿಂದ

# ದ್ವಿತೀಯ ಪಿಯುಸಿ ದಾಖಲೆ ಫಲಿತಾಂಶ ;ಶೇ.86.48ರಷ್ಟು ಪಾಸ್ ಬಾಲಕಿಯರೇ ಮೇಲುಗೈ

ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳು ಪ್ರಥಮ ಸ್ಥಾನ ಪಡೆದಿವೆ. ಈ ಬಾರಿಯೂ ಈ ಎರಡು ಜಿಲ್ಲೆಗಳು ಅತ್ಯಧಿಕ ಪಾಸ್ ಪ್ರಮಾಣ ದಾಖಲಿಸಿವೆ.
ಶೇಕಡಾ 96.39 ಫಲಿತಾಂಶ ಪಡೆದು ಉಡುಪಿ ಜಿಲ್ಲೆ ರಾಜ್ಯಕ್ಕೆ ಮತ್ತೆ ಪ್ರಥಮ ಸ್ಥಾನ ಪಡೆದುಕೊಂಡರೆ, ಉತ್ತರ ಕನ್ನಡ ಜಿಲ್ಲೆ ಶೇಕಡಾ 96.35 ಫಲಿತಾಂಶದೊಂದಿಗೆ ರಾಜ್ಯಕ್ಕೆ ಎರಡನೇ ಸ್ಥಾನ ಪಡೆದಿದೆ.
ಬೆಂಗಳೂರು ನಗರ ಮತ್ತು ಮೈಸೂರು ಜಿಲ್ಲೆಗಳೂ ಉತ್ತಮ ಸಾಧನೆ ತೋರಿದ್ದು, ಹಾಸನ ಹಾಗೂ ಯಾದಗಿರಿ ಜಿಲ್ಲೆಗಳು ಶೇಕಡಾ 71.21 ಫಲಿತಾಂಶದೊಂದಿಗೆ ರಾಜ್ಯಕ್ಕೆ ಕೊನೆಯ ಸ್ಥಾನದಲ್ಲಿವೆ.

ಟಾಪರ್ ಗಳು:
ವಾಣಿಜ್ಯ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ದಿಶಾ ಅವರು 600 ಅಂಕಗಳಿಗೆ 600 ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.
ಇನ್ನು ಕಲಾ ವಿಭಾಗದಲ್ಲಿ ಬಳ್ಳಾರಿ ಜಿಲ್ಲೆಯ ಕೊಟ್ಟೂರಿನ ಇಂದು ಕಾಲೇಜಿನ ಇಬ್ಬರು ವಿದ್ಯಾರ್ಥಿನಿಯರಾದ ಅರ್ಚನಾ ಮತ್ತು ಸಂಗೀತ ಅವರು 600 ಅಂಕಗಳಿಗೆ 598 ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಶಮನ್ಯು ಎಸ್. ಶೆಟ್ಟಿ ಅವರು 600 ಅಂಕಗಳಿಗೆ 598 ಅಂಕ ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.

ಫಲಿತಾಂಶ ಲಭ್ಯ:
ಇದೇ ಮೊದಲ ಬಾರಿಗೆ ವಿದ್ಯಾರ್ಥಿಗಳ ಫಲಿತಾಂಶದ ಅಂಕಪಟ್ಟಿಯು ಡಿಜಿಲಾಕರ್ ಮೂಲಕ ಲಭ್ಯವಾಗಲಿದೆ. ಒಂದು ವೇಳೆ ವೆಬ್‌ಸೈಟ್‌ನಲ್ಲಿ ರಿಸಲ್ಟ್ ನೋಡುವಾಗ ಸರ್ವರ್ ಸಮಸ್ಯೆ ಎದುರಾದರೆ ಡಿಜಿಲಾಕರ್ ಮೂಲಕವೇ ಮಾರ್ಕ್ಸ್ ಕಾರ್ಡ್ ಪಡೆದುಕೊಳ್ಳಬಹುದು.

ದಿಶಾ ವಾಣಿಜ್ಯ ಪ್ರಥಮ

ಮೂಡುಬಿದಿರೆಯ ಆಳ್ವಾಸ್ ಪಿಯು ಕಾಲೇಜು ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶದಲ್ಲಿ ರಾಜ್ಯಮಟ್ಟದಲ್ಲಿ ಅಭೂತಪೂರ್ವ ಯಶಸ್ಸು ಸಾಧಿಸಿದೆ.ವಾಣಿಜ್ಯ ವಿಭಾಗದಲ್ಲಿ ಆಳ್ವಾಸ್ ಕಾಲೇಜಿನ ವಿದ್ಯಾರ್ಥಿನಿ ದಿಶಾ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆಯುವ ಮೂಲಕ ಶೈಕ್ಷಣಿಕ ಕ್ಷೇತ್ರದಲ್ಲಿ ಹೊಸ ದಾಖಲೆ ಬರೆದಿದ್ದಾರೆ.

ಮೂಡುಬಿದಿರೆಯ ದಿಶಾ. ವಾಣಿಜ್ಯ ವಿಭಾಗದ ಆರೂ ವಿಷಯಗಳಲ್ಲಿ 600 (ಶೇ.100) ಅಂಕಗಳನ್ನು ಪಡೆಯುವ ಮೂಲಕ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ.
ಕಲಾ ವಿಭಾಗದಲ್ಲಿ ಬಳ್ಳಾರಿ ಜಿಲ್ಲೆಯ ಕೊಟ್ಟೂರಿನ ಇಂದು ಕಾಲೇಜಿನ ಇಬ್ಬರು ವಿದ್ಯಾರ್ಥಿನಿಯರಾದ ಅರ್ಚನಾ ಮತ್ತು ಸಂಗೀತ ಅವರು 600 ಅಂಕಗಳಿಗೆ 598 ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ.
ವಿಜ್ಞಾನ ವಿಭಾಗದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಶಮನ್ಯು ಎಸ್. ಶೆಟ್ಟಿ ಅವರು 600 ಅಂಕಗಳಿಗೆ 598 ಅಂಕ ಪಡೆದು ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದಾರೆ

ಬಳ್ಳಾರಿ ಸೆಂಟ್ರಲ್ ಜೈಲಿನ
ಕೈದಿಗೆ 600ಕ್ಕೆ 481

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಬಳ್ಳಾರಿ ಸೆಂಟ್ರಲ್ ಜೈಲಿನ ಶಿಕ್ಷಾ ಬಂಧಿ ಫಸ್ಟ್ ಕ್ಲಾಸ್‌ನಲ್ಲಿ ಪಾಸಾಗಿದ್ದಾನೆ. 600ಕ್ಕೆ 481 ಅಂಕಗಳನ್ನು ಪಡೆದಿದ್ದಾನೆ.
ಶಿಕ್ಷಾಬಂಧಿ ಅಶೋಕ್ ಕುಮಾರ್ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಫಸ್ಟ್ ಕ್ಲಾಸ್ ಬಂದಿದ್ದಾನೆ. ಈತ ಕಲಾ ವಿಭಾಗದಲ್ಲಿ ಪರೀಕ್ಷೆ ಬರೆದಿದ್ದ. 600ಕ್ಕೆ 481 ಅಂಕ ಪಡೆಯುವ ಮೂಲಕ ಶೇ.81% ಫಲಿತಾಂಶದ ಸಾಧನೆ ಮಾಡಿದ್ದಾನೆ.
ಕನ್ನಡದಲ್ಲಿ 82, ಇಂಗ್ಲಿಷ್ 69, ಇತಿಹಾಸ 94, ಅರ್ತಶಾಸ್ತ್ರ 84, ಸಮಾಜಶಾಸ್ತ್ರ 77, ರಾಜ್ಯಶಾಸ್ತ್ರ75 ಅಂಕ ಗಳಿಸಿದ್ದಾನೆ. ಶಿಕ್ಷಾಬಂಧಿ ಅಶೋಕ್ ಕುಮಾರ್ ಜೈಲಿನ ಪ್ರತ್ಯೇಕ ಸೆಲ್‌ನಲ್ಲಿಯೇ ಅಭ್ಯಾಸ ಮಾಡಿದ್ದ.

ಯಾವ ಜಿಲ್ಲೆ ಎಷ್ಟನೇ ಸ್ಥಾನ

ಕಳೆದ ಬಾರಿ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಉಡುಪಿ ಪ್ರಥಮ ಸ್ಥಾನ ಪಡೆದುಕೊಂಡಿದ್ದರೆ, ಯಾದಗಿರಿ ಕೊನೆ ಸ್ಥಾನದಲ್ಲಿತ್ತು.ಈ ಬಾರಿಯೂ ಸಹ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಉಡುಪಿ ಪ್ರಥಮ, ಯಾದಗಿರಿ ಕೊನೇ ಸ್ಥಾನದಲ್ಲಿದೆ. ಶೇಕಡಾ 9639 ಫಲಿತಾಂಶ ಪಡೆದು ಉಡುಪಿ ಜಿಲ್ಲೆ ರಾಜ್ಯಕ್ಕೆ ಮತ್ತೆ ಪ್ರಥಮ ಸ್ಥಾನ ಪಡೆದುಕೊಂಡರೆ, ಉತ್ತರ ಕನ್ನಡ ಜಿಲ್ಲೆ ಶೇಕಡಾ 96.35 ಫಲಿತಾಂಶದ ಮೂಲಕ ರಾಜ್ಯದಲ್ಲೇ ಎರಡನೇ ಸ್ಥಾನ ಪಡೆದಿದೆ.
ಇನ್ನು ಹಾಸನ ಯಾದಗಿರಿ ಜಿಲ್ಲೆ ಶೇಕಡಾ 71.21 ಫಲಿತಾಂಶದ ಮೂಲಕ ರಾಜ್ಯಕ್ಕೆ ಕೊನೆಯ ಸ್ಥಾನದಲ್ಲಿದೆ.

| | | |
|---|---|---|
| ಜಿಲ್ಲಾವಾರು ಫಲಿತಾಂಶ | ಹಾಸನ 89.71% | ಹಾವೇರಿ 84.11% |
| ಉಡುಪಿ 96.39% | ಮಂಡ್ಯ 88.85% | ಧಾರವಾಡ 83.31% |
| ದಕ್ಷಿಣ ಕನ್ನಡ 96.35% | ರಾಮನಗರ 87.90% | ಚಿಕ್ಕೋಡಿ 83.10% |
| ಕೊಡಗು 92.34% | ಕೋಲಾರ 87.38% | ದಾವಣಗೆರೆ 81.99% |
| ವಿಜಯಪುರ 92% | ಶಿವಮೊಗ್ಗ 87.62% | ಬೆಳಗಾವಿ 80.32% |
| ಉತ್ತರ ಕನ್ನಡ 91.78% | ತುಮಕೂರು 86.89% | ಚಿತ್ರದುರ್ಗ 79.12% |
| ಬೆಂಗಳೂರು ಗ್ರಾಮಾಂತರ 91.00% | ಕೊಪ್ಪಳ 86.80% | ಬಳ್ಳಾರಿ 78.69% |
| ಚಿಕ್ಕಮಗಳೂರು 90.80% | ಚಾಮರಾಜನಗರ 84.68% | ಕಲಬುರಗಿ 76.97% |
| ಬೆಂಗಳೂರು ದಕ್ಷಿಣ 90.55% | ಮೈಸೂರು 84.80% | ಗದಗ 76.65% |
| ಚಿಕ್ಕಬಳ್ಳಾಪುರ 90.24% | ಬೀದರ್ 84.61% | ರಾಯಚೂರು 74.09% |
| ಬೆಂಗಳೂರು ಉತ್ತರ 90.05% | ಬಾಗಲಕೋಟೆ 84.12% | ಯಾದಗಿರಿ 71.21% |

# ಸೈಕೋ ಥ್ರಿಲ್ಲರ್ ಅವತಾರದಲ್ಲಿ ಶಾಕ್ ಕೊಡಲು ಜೆಕೆ ರೆಡಿ!: ಈ ವಾರ ತೆರೆಗೆ

ಸ್ಯಾಂಡಲ್‌ವುಡ್‌ನಲ್ಲಿ ಈ ವಾರ ಸೈಕೋ ಥ್ರಿಲ್ಲರ್ ಹವಾ ಎಬ್ಬಿಸಲು "ಕಾಡ" ಸಿನಿಮಾ ಏಪ್ರಿಲ್ 10ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಜಯರಾಮ್ ಕಾರ್ತಿಕ್ (ಜೆ.ಕೆ) ಈ ಚಿತ್ರದಲ್ಲಿ ಇದುವರೆಗೆ ಮಾಡದ ವಿಭಿನ್ನ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಈಗಾಗಲೇ ಕುತೂಹಲ ಹೆಚ್ಚಿಸಿದೆ.



ಚಿತ್ರವನ್ನು ವಿಶ್ರುತ್ ನಾಯಕ್ ನಿರ್ದೇಶಿಸಿದ್ದು, ಇದು ಅವರ ಮೂರನೇ ಸಿನಿಮಾ. ಸೈಕೋಪಾತ್‌ಗಳ ಮನೋಭಾವದ ಸುತ್ತ ಹೆಣೆಯಲ್ಪಟ್ಟಿರುವ ಈ ಕಥೆ, ವಿಭಿನ್ನ ರೀತಿಯಲ್ಲಿ ರೂಪುಗೊಂಡಿದೆ. ಎರಡು ಬೇರೆ ಕಥೆಗಳಾಗಿ ಆರಂಭವಾಗಿ, ಒಂದೇ ಲೈನ್‌ಗೆ ಸೇರುವ ನ್ಯಾರೇಟಿವ್ ಚಿತ್ರದ ವಿಶೇಷತೆ ಎಂದು ನಿರ್ದೇಶಕರು ತಿಳಿಸಿದ್ದಾರೆ. ಸಾಕಷ್ಟು ಅಧ್ಯಯನದ ನಂತರ ಈ ಕಥೆಯನ್ನು ರೂಪಿಸಿರುವುದಾಗಿ ಅವರು ಹೇಳಿದರು.

ಅಮಿತ್ ಕುಮಾರ್ ಸಕ್ಸೇನ ನಿರ್ಮಿಸಿರುವ ಈ ಚಿತ್ರದಲ್ಲಿ ಜಯರಾಮ್ ಕಾರ್ತಿಕ್ ಅಭಿನಯಕ್ಕೆ ವಿಶೇಷ ಮೆಚ್ಚುಗೆ ವ್ಯಕ್ತವಾಗಿದೆ. ಜೊತೆಗೆ ಕಾವ್ಯ ಶೆಟ್ಟಿ, ಅಚ್ಯುತಕುಮಾರ್, ಉಗ್ರಂ ಮಂಜು, ಶ್ರೀರಾಮ್ ಮುಂತಾದವರು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಇತ್ತೀಚೆಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಜಯರಾಮ್ ಕಾರ್ತಿಕ್, "ಈ ಸಿನಿಮಾ ನನ್ನಿಗೆ ವಿಭಿನ್ನ ಅನುಭವ. ನಾನು ಮಾಡದ ರೀತಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಕಥೆ ಕೇಳಿದಾಗಲೇ ಇಷ್ಟವಾಯಿತು. ಸಕಲೇಶಪುರದಲ್ಲಿ ನಡೆದ ಚಿತ್ರೀಕರಣ ಅದ್ಭುತ ಅನುಭವ ನೀಡಿತು. ಚಿತ್ರವನ್ನು ಪ್ರೇಕ್ಷಕರು ಮೆಚ್ಚುತ್ತಾರೆ ಎಂಬ ಭರವಸೆ ಇದೆ" ಎಂದರು.

ಚಿತ್ರಕ್ಕೆ ಸತೀಶ್ ಬಾಬು ಸಂಗೀತ, ಅರುಣ್ ಸುರೇಶ್ ಛಾಯಾಗ್ರಹಣ, ವಿಕಾಸ್ ಚಂದ್ರ ಸಂಕಲನ ನೀಡಿದ್ದು, ಸಾಹಸ ನಿರ್ದೇಶನವನ್ನು ನಿರ್ದೇಶಕ ವಿಶ್ರುತ್ ನಾಯಕ್ ಹಾಗೂ ರಮೇಶ್ ನಿರ್ವಹಿಸಿದ್ದಾರೆ.

# ಸರ್ಕಾರಿ ಜಮೀನು ಉಳಿವಿಗಾಗಿ ಸಿರುಗುಪ್ಪ ದಿಂದ ಬಳ್ಳಾರಿವರೆಗೆ ಪಾದಯಾತ್ರೆ : ಭೂಗಳ್ಳರ ವಿರುದ್ಧ ಸೂಕ್ತ ಕಾನೂನು ಕ್ರಮಕ್ಕೆ ಒತ್ತಯ



**ಸಿರುಗುಪ್ಪ,:** ತಾಲೂಕಿನ ಹಳೆಕೋಟೆ, ಸಿರಿಗೇರಿ, ದೇಶನೂರು ಗ್ರಾಮಗಳಲ್ಲಿ ನೂರಾರು ಎಕರೆ ಜಮೀನನ್ನು ಅಕ್ರಮವಾಗಿ ತಮ್ಮ ಸಂಬಂಧಿಕರ ಹೆಸರಿಗೆ ನೊಂದಣಿ ಮಾಡಿದ ಅಧಿಕಾರಿಗಳನ್ನು ವಜಾ ಮಾಡಬೇಕೆಂದು ಒತ್ತಾಯಿಸಿ ನಮ್ಮ ಸಂಘಟನೆ ವತಿಯಿಂದ ಏ.23 ರಿಂದ ಬಳ್ಳಾರಿಗೆ ಪಾದಯಾತ್ರೆ ಮಾಡಲಾಗುತ್ತದೆ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ವಿ.ಎಸ್ ಶಿವಶಂಕರ ಹೇಳಿದರು.

ನಗರದ ಶ್ರಮಿಕ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ 64 ಹಳಿಕೋಟೆ ಗ್ರಾಮದಲ್ಲಿ 7.93 ಎಕರೆ ಜಮೀನು ಪಹಣಿಯಲ್ಲಿರುವ ಪಟ್ಟಾದಾರರು ಸುಮಾರು 80 ರಿಂದ 90 ವರ್ಷಗಳಿಂದ ಯಾರೂ ವಾರಸುದಾರರಿಲ್ಲ ಹಾಲಿ ಜಮೀನಿನ ಸ್ವಲ್ಪ ಭಾಗ ಬೀಳು ಬಿದ್ದಿದ್ದು ಇದನ್ನು ಬಿಟ್ಟು ಇನ್ನುಳಿದ ಜಮೀನಿನಲ್ಲಿ ಎಸ್ಸಿ–ಎಸ್ಟಿ ಸಮುದಾಯದ ರೈತರು ಸಾಗುವಳಿ ಮಾಡುತಿದ್ದು.

ಇದರಲ್ಲಿ ಸುಮಾರು 68 ಎಕರೆ ಜಮೀನನ್ನು ಕೆಲವು ಭೂಗಳ್ಳರು ನಕಲಿ ದಾಖಲೆಗಳನ್ನು ಸೃಷ್ಟಿಸಿದ್ದು, ಕಾನೂನು ಬಾಹಿರವಾಗಿ ಸಿರುಗುಪ್ಪ ಸಬ್ ರಿಜಿಸ್ಟರ್ ಎಲ್ಲರೆಡ್ಡೆಪ್ಪ ವೀಲುನಾಮ ನೋಂದಣಿ ಮಾಡಿದ್ದಾರೆ. ಈ ವೀಲುನಾಮದ ಬಗ್ಗೆ ಹಳೆಕೋಟೆ ರೈತರು ತಕರಾರು ಅರ್ಜಿಸಲ್ಲಿಸಿದ್ದರಿಂದ, ತಹಶೀಲ್ದಾರರು ನೈಜತೆಯು ಬಗ್ಗೆ ಅನುವಮಾನ ಇರುವುದರಿಂದ ತಿರಸ್ಕರಿಸಿದ್ದಾರೆ ಎಂದು ಹೇಳಿದ ಅವರು, ಸಿರಿಗೇರಿ ಗ್ರಾಮದ ಸರ್ವೇ ನಂ. 362 ವಿ –46.51 ಎಕರೆ ಸರ್ಕಾರಿ ಇನಾಂ ಜಮೀನಾಗಿದ್ದು. ಈ ಜಮೀನಿಗೆ ಯಾರು ಕೂಡ ಪಟ್ಟಾದಾರರು ಇರುವುದಿಲ್ಲ. ಇನಾಂ. ರಿ ಗ್ರಾಂಟ್ ಸಹ ಆಗಿರುವುದಿಲ್ಲ. ಯಾರಿಗೂ ನಮೂನೆ 2 ರೈತವಾರಿ ಹಕ್ಕುಪತ್ರವನ್ನು ನೀಡಿರುವುದಿಲ್ಲ ಇದು ಸಂಪೂರ್ಣ ಸರ್ಕಾರಿ ಇನಾಂ ಜಮೀನಾಗಿರುತ್ತದೆ. ಅದರೂ ಸಹ ಎಲ್ಲರೆಡ್ಡೆಪ್ಪ ತಮ್ಮ ಕುಟುಂಬದ ಸದಸ್ಯರಿಗೆ ಈ ಜಮೀನನ್ನು ನೋಂದಣಿ ಮಾಡಿಸಿಕೊಳ್ಳಲು ಪ್ರಯತ್ನ ಮಾಡುತ್ತಿದ್ದು, ತಾಲೂಕಿನಲ್ಲಿ ಸುಮಾರು 130 ಎಕರೆಗೂ ಹೆಚ್ಚಿನ ಸರ್ಕಾರಿ ಜಮೀನನ್ನು ತಮ್ಮ ಹೆಸರಿಗೆ ನೋಂದಣಿ ಮಾಡಿಸಿಕೊಳ್ಳಲು ಮುಂದಾಗಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ, ಸರ್ಕಾರಿ ಜಮೀನನ್ನು ಸರ್ಕಾರ ವಶಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿ, ಸಹಾಯಕ ಆಯುಕ್ತರಿಗೆ ಅನೇಕ ಬಾರಿ ಮನವಿ ಸಲ್ಲಿಸಲಾಗಿದೆ.

ಕ್ರಮ ಕೈಗೊಂಡಿಲ್ಲ ಅಧಿಕಾರಿಗಳ ನಿರ್ಲಕ್ಷ್ಯ ಅನೇಕ ರೀತಿಯ ಅನುಮಾನಗಳಿಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಸರ್ಕಾರಿ ಜಮೀನಿನ ಅಕ್ರಮ ನೋಂದಣಿಯ ಬಗ್ಗೆ ಬಳ್ಳಾರಿಯಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಸಿರುಗುಪ್ಪ ಮತ್ತು ಕಂಪ್ಲಿ ಶಾಸಕರು ಮಾತನಾಡಿದ್ದಾರೆ. ಶಾಸಕರ ಗಮನಕ್ಕೂ ಈ ವಿಷಯವನ್ನು ತರಲಾಗಿದೆ.

ಸಿರುಗುಪ್ಪ ಸಬ್ ರಿಜಿಸ್ಟರ್‌ವಿರುದ್ಧ ಈಗಾಗಲೇ ಬಳ್ಳಾರಿಯ ಜಾರಿ ನಿರ್ದೇಶನಾಲಯದಲ್ಲಿ ದೂರು ದಾಖಲಿಸಲಾಗಿದೆ. ಲೋಕಾಯುಕ್ತರಿಗೂ ಈ ಬಗ್ಗೆ ದೂರನ್ನು ಸಲ್ಲಿಸಲಿದ್ದೇವೆ ಎಂದು ಹೇಳಿದ ಅವರು, ಏ.28ರಂದು ಸಿರುಗುಪ್ಪದ ಗಾಂಧಿ ವೃತ್ತದಿಂದ ಆರಂಭವಾಗಲಿರುವ ಪಾದಯಾತ್ರೆಯು ಏ.29ರಂದು ಬಳ್ಳಾರಿಗೆ ತಲುಪಲಿದ್ದು, ನಮ್ಮ ಬೇಡಿಕೆಗಳ ಬಗ್ಗೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದು ತಿಳಿಸಿದರು.

ತಾಲೂಕು ಅಧ್ಯಕ್ಷ ವಿ.ಮಾರುತಿ, ಮುಖಂಡರಾದ ಎಂ.ದುರ್ಗಪ್ಪ, ಹೆಚ್. ಗಾಳಿಪ್ಪ, ಈರಣ್ಣ, ಓಬಳೇಶಪ್ಪ, ಹನುಮೇಶ, ಎಂ.ದುರುಗಪ್ಪ ಇನ್ನಿತರರು ಇದ್ದರು.

# ಜೆಸ್ಕಾಂ ನಗರ–2: ಏಪ್ರಿಲ್ 11ರಂದು ವಿದ್ಯುತ್ ವ್ಯತ್ಯಯ

ಧೈರ್ಯದ ದಾರಿ

**ರಾಯಚೂರು:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ 110 ಕೆ.ವಿ ಮೇಸ್, ವಡವಟ್ಟಿ ವಿದ್ಯುತ್ ಮಾರ್ಗದ ದುರಸ್ತಿ ಹಾಗೂ ಸುಧಾರಣೆ ಕಾಮಗಾರಿಯನ್ನು ನಿರ್ವಹಿಸುವ ಪ್ರಯುಕ್ತ ಏಪ್ರಿಲ್ 11ರ ಬೆಳಿಗ್ಗೆ 10ರಿಂದ ಸಂಜೆ 4ರವರೆಗೆ ದೇವಿ ನಗರ, ಹರಿಜನವಾಡ, ನವಾಬ್ ಗಡ್ಡ, ಎನ್.ಜಿ.ಓ ಕಾಲೋನಿ, ಮುನ್ನೂರುವಾಡಿ. ಜಲಾಲ್ ನಗರ, ಮಾರ್ಕೇಟ್ ಯಾರ್ಡ್, ನೀರಭಾವಿ ಕುಂಟಾ, ಬಸವನಭಾವಿ ಸರ್ಕಲ್, ತಾಯಮ್ಮ ಗುಡಿ, ದೇವಿನಗರ, ಅಶ್ವಿನಿ ಕಾಲೋನಿ, ಅಗ್ರೀಗೋಲ್ಡ್, ಗದ್ವಾಲ ರೋಡ, ಎಮ್.ವಿ.ಜಿ. ಲೇಔಟ್ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.
ಹೆಚ್ಚಿನ ಮಾಹಿತಿಗಾಗಿ ನಿರಂತರ ಗ್ರಾಹಕರ ಸೇವಾ ಕೇಂದ್ರ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ 2ರ ಸಹಾಯಕಕಾರ್ಯನಿರ್ವಾಹಕಅಭಿಯಂತರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತುರ್ವಿಹಾಳ ಪಟ್ಟಣ ಪಂಚಾಯತ: ವೈಯಕ್ತಿಕ ಚಟುವಟಿಕೆಗಳಿಗೆ ಅರ್ಜಿ ಆಹ್ವಾನ

ಧೈರ್ಯದ ದಾರಿ

**ರಾಯಚೂರು:** ಜಿಲ್ಲೆಯ ತುರ್ವಿಹಾಳ ಪಟ್ಟಣ ಪಂಚಾಯತ ವತಿಯಿಂದ 2026–27ನೇ ಸಾಲಿನ ಎಸ್.ಎಫ್.ಸಿ. ಶೇ.7.25 ಇತರೆ ಬಡಜನರ ಕಲ್ಯಾಣಕ್ಕಾಗಿ ಮತ್ತು ಶೇ.5 ವಿಕಲಚೇತನರಿಗಾಗಿ ಯೋಜನೆಗೆ ಕಾಯ್ದಿರಿಸಲಾದ ಎಸ್.ಎಫ್.ಸಿ. ಮುಕ್ತ ನಿಧಿ ಅನುದಾನ ಅನುಷ್ಠಾನಕ್ಕಾಗಿ ವೈಯಕ್ತಿಕ ಚಟುವಟಿಕೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.
2026–27 ನೇ ಸಾಲಿನ ಎಸ್ ಎಪ್ ಸಿ□7.25% ಇತರೆ ಬಡ ವರ್ಗದವರಿಗೆ ಶಸ್ತ್ರ ಚಿಕಿತ್ಸೆಗೆ ಒಳಗಾಗಿರುವ ರೋಗಿಗಳಿಗೆ ಧನ ಸಹಾಯಕ್ಕೆ ನಿಗದಿತ ಅರ್ಜಿ ನಮೂನೆ 2025–26ನೇ ಸಾಲಿನೊಳಗೆ ಶಸ್ತ್ರ ಚಿಕಿತ್ಸೆಗೊಳಗಾದ ದಾಖಲಾತಿಗಳು (ವೈದ್ಯಾಧಿಕಾರಿಗಳಿಂದ ದೃಡೀಕರಣ ಪ್ರಮಾಣ ಪತ್ರ) ಆಧಾರ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಬುಕ್ ಝರಾಕ್ಸ್ ಪ್ರತಿ ಚುನಾವಣಾ ಗುರುತಿನ ಚೀಟಿ ಸಲ್ಲಿಸಬೇಕು.
ವಿಕಲಾಂಗಚೇತನರು, ಪೋಲಿಯೋ ರೋಗಕೊಳ ಪಟ್ಟವರಿಗೆ ಕೃತಕ ಜೋಡಣೆಗೆ ತಗುಲುವ ಮೊತ್ತದ ಸಹಾಯಧನಕ್ಕೆ ನಿಗದಿತ ಅರ್ಜಿ ನಮೂನ,? ಅಂಗವಿಕಲ ಪ್ರಮಾಣ ಪತ್ರ, ವೈದ್ಯಾಧಿಕಾರಿಗಳಿಂದ ದೃಡೀಕರಣ ಪತ್ರ, ಆಧಾರ ಕಾರ್ಡ್, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಚುನಾವಣೆ ಗುರುತಿನ ಚೀಟಿ, ಬ್ಯಾಂಕ್ ಪುಸ್ತಕ ಝರಾಕ್ಸ್ ಸಲ್ಲಿಸಬೇಕು.
2026–27ನೇ ಸಾಲಿನ ಎಸ್‌ಎಪ್‌ಸಿ ಯೋಜನೆಯಡಿ ಪರಿಶಿಷ್ಟ ಜಾತಿಯ ಎಸ್.ಎಸ್.ಎಲ್.ಸಿ ಉತ್ತಿರ್ಣವಾಗಿರುವ ವಿದ್ಯಾರ್ಥಿಗಳಿಗೆ ಪ್ರತ್ಸಾಹ ಧನಕ್ಕೆ 2025–26 ನೇ ಸಾಲಿನಲ್ಲಿ ಉತ್ತೀರ್ಣವಾದ ವಿದ್ಯಾರ್ಥಿಗಳು ಶಾಲೆಯ ದೃಡೀಕರಣ ಪತ್ರ, (ಪ್ರಸಕ್ತ ಸಾಲಿನ) ಶಾಲೆಯಲ್ಲಿ ಫೀ ತುಂಬಿದ ರಸೀದಿ, ಎಸ್.ಎಸ್.ಎಲ್.ಸಿ ಅಂಕಪಟ್ಟಿ ಝರಾಕ್ಸ್ ಪ್ರತಿ, ಪಡಿತರ ಚೀಟಿ, ಆಧಾರ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಾಸ್ ಪೊಟೊ, ಬ್ಯಾಂಕ್ ಪುಸ್ತಕ ಝರಾಕ್ಸ್ ಪ್ರತಿ, ವಾಸಸ್ಥಳ ಪ್ರಮಾಣ ಪತ್ರದೊಂದಿಗೆ ಏಪ್ರಿಲ್ 22ರ ಸಂಜೆ 5.30ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕ ಮೀರಿ ಬಂದಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: http://www.itstaffulbturvihal.co.in ನಲ್ಲಿ ಈ ಮಾಹಿತಿಯನ್ನು ಡೌನ್‌ಲೋಡ್ ಮಾಡಿಕೊಂಡು ವಿವರ ಪಡೆದುಕೊಳ್ಳಬಹುದಾಗಿದೆ ಎಂದು ತುರ್ವಿಹಾಳ ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾರಣಿಗರ ಸುರಕ್ಷತೆಗೆ ಮಾನದಂಡ ರೂಪಿಸಿ

**ಬೆಂಗಳೂರು, ಏ.9:** ರಾಜ್ಯದ ಗಿರಿಶ್ರೇಣಿಗಳಿಗೆ ಬರುವ ಚಾರಣಿಗರ ಸುರಕ್ಷತೆಯ ದೃಷ್ಟಿಯಿಂದ ದೇಶಕ್ಕೆ ಮಾದರಿಯಾಗುವಂತಹ ಪ್ರಮಾಣಿತ ಮಾನದಂಡ (ಎಸ್.ಓ.ಪಿ.) ರೂಪಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.ತಡಿಯಾಂಡಮೋಲ್ ಚಾರಣದ ವೇಳೆ ಕೇರಳದ ಶರಣ್ಯ ಎಂಬ ಮಹಿಳೆ 3 ದಿನ ಕಾಡಿನಲ್ಲಿ ದಿನ ಕಳೆದ ಹಾಗೂ ಚಂದ್ರದ್ರೋಣ ಪರ್ವತದಲ್ಲಿ ಅಪ್ರಾಪ್ತ ವಯಸ್ಕ ಬಾಲಕಿ ನಾಪತ್ತೆಯಾಗಿರುವ ಹಿನ್ನೆಲೆಯಲ್ಲಿ ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಸೂಚನೆ ನೀಡಿರುವ ಅವರು, ಈ ಸೂಚನೆ ನೀಡಿದ್ದಾರೆ.ಅರಣ್ಯ ಇಲಾಖೆ ಈಗಾಗಲೇ ಅಭಿವೃದ್ಧಿಪಡಿಸಿರುವ ಇ–ಗಸ್ತು, ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಬಳಕೆ ಮಾಡುವ ಎಂ.ಸ್ಟ್ರೈಪ್ಸ್ ನಂತಹ ಆಪ್ ರೀತಿಯಲ್ಲೇ ಚಾರಣ ಅವಧಿಯಲ್ಲಿ ತಾತ್ಕಾಲಿಕವಾಗಿ ಚಾರಣಿಗರ ಮೊಬೈಲ್ ನಲ್ಲಿ ಈ ಆಪ್ ಅಳವಡಿಸಿದರೆ, ಯಾರೇ ದಾರಿ ತಪ್ಪಿಸಿಕೊಂಡರೂ ಅವರ ಶೋಧಕಾರ್ಯ ಸುಲಭವಾಗುತ್ತದೆ, ಹೀಗಾಗಿ ಆಪ್ ಅಭಿವೃದ್ಧಿಗೆ ಕ್ರಮವಹಿಸುವಂತೆ ಮತ್ತು ಚಾರಣಿಗರಿಗೆ ಗುಂಪು ವಿಮೆ ಮಾಡಿಸುವಂತೆ ಅರಣ್ಯ ಸಚಿವರು ನಿರ್ದೇಶಿಸಿದ್ದಾರೆ.ಇದರ ಜೊತೆಗೆ ಚಾರಣಿಗರಿಗೆ ಮಾರ್ಗದರ್ಶನ ಮಾಡುವ ನೇಚರ್ ಗೈಡ್ ಗಳಿಗೆ ಕಡ್ಡಾಯವಾಗಿ ವೈರ್ ಲೆಸ್ ಸೆಟ್ ನೀಡುವಂತೆ ಮತ್ತು ಚಾರಣಿಗರನ್ನು ತಮ್ಮೊಂದಿಗೆ ಕರೆದುಕೊಂಡು ಹೋಗುವ ಗೈಡ್ ಗಳಿಗೆ ಹೊಣೆಗಾರಿಕೆ ನಿಗದಿ ಮಾಡುವಂತೆಯೂ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

# 3 ರಾಜ್ಯಗಳಲ್ಲಿ ಮತದಾನ ಶಾಂತಿಯುತ



**ನವದೆಹಲಿ,ಏ.9–** ದೇಶದ ಭವಿಷ್ಯದ ರಾಜಕಾರಣದ ದಿಕ್ಸೂಚಿ ಎಂದೇ ಹೇಳಲಾಗುತ್ತಿರುವ ಪಂಚ ರಾಜ್ಯಗಳ ವಿಧಾನಸಭಾ ಚುನಾವಣಾ ಪೈಕಿ ಇಂದು ಅಸ್ಸಾಂ, ಕೇರಳ ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿ ವಿಧಾನಸಭೆ ಚುನಾವಣೆಗೆ ಮತದಾನ ಬಿರುಸಿನಿಂದ ಸಾಗಿದ್ದು ಎಲ್ಲೆಡೆ ಮತದಾನ ಬಹುತೇಕ ಶಾಂತಿಯುತವಾಗಿ ನಡೆದಿದೆ.

ಅಸ್ಸಾಂ ಪುದುಚೇರಿ ಮತ್ತು ಕೇರಳಂನಲ್ಲಿ ಯಾರಿಗೆ ಅಧಿಕಾರ ಚುಕ್ಕಾಣಿ ಸಿಗಲಿದೆ ಹಾಗೂ ಘಟಾನುಘಟಿ ನಾಯಕರುಗಳ ರಾಜಕೀಯ ಭವಿಷ್ಯಕ್ಕೆ ಮತದಾರರು ಇಂದು ಮುದ್ರೆ ಒತ್ತಿದ್ದಾರೆ ಮತದಾರರ ತೀರ್ಪು ವಿದ್ಯುನ್ಮಾನ ಮತಯಂತ್ರಗಳಲ್ಲಿ ಭದ್ರವಾಗಿದ್ದುಮೇ ನಾಲ್ಕರಂದು ಮತದಾರರ ತೀರ್ಪು ಬಹಿರಂಗವಾಗಲಿದೆ ಇಂದು ಮತದಾನ ನಡೆದಿರುವ ಮೂರು ರಾಜ್ಯಗಳಲ್ಲೂ ಮತದಾರರು ಉತ್ಸಾಹದಿಂದ ಬಂದು ಮತ ಚಲಾಯಿಸುತ್ತಿದ್ದು ಮತದಾನ ಬಿರಿಸಿನಿಂದ ಸಾಗಿದೆ

ಅಸ್ಸಾಂನಲ್ಲಿ ಮಧ್ಯಾಹ್ನದ ವೇಳೆಗೆ ಶೇ.55. ಕೇರಳ ಶೇ.54.23 ಮತ್ತು ಪುದುಚೇರಿ ಶೇ.56.41 ಮತದಾನವಾಗಿದೆ, ಸಂಜೆ 6 ಗಂಟೆಯ ತನಕ ಮತದಾನ ನಡೆಯಲಿದ್ದು ಈ ಪ್ರಮಾಣ ಮತ್ತಷ್ಟು ಹೆಚ್ಚುವ ಸಾಧ್ಯತೆ ಇದೆ.

ಕೇರಳಂನ 140 ವಿಧಾನಸಭಾ ಕ್ಷೇತ್ರ, ಅಸ್ಸಾಂನ 126 ಮತ್ತು ಪುದುಚೆರಿಯ 30 ವಿಧಾನಸಭಾ ಕ್ಷೇತ್ರಗಳಿಗೆ ಬಿಗಿ ಭದ್ರತೆಯಲ್ಲಿ ಮತದಾನ ಶಾಂತಿಯುತವಾಗಿ ನಡೆದಿದೆ ಅಸ್ಸಾಂ ಮತ್ತು ಕೇರಳ ರಾಜ್ಯಗಳಲ್ಲಿ ಬಿಜೆಪಿ ಮತ್ತು ಎಡ ಪಕ್ಷಗಳು ಹ್ಯಾಟ್ರಿಕ್ ಗೆಲುವಿಗೆ ರಣತಂತ್ರ ರೂಪಿಸಿದ್ದರೆ ,ಪುದುಚೇರಿಯಲ್ಲಿ ಎನ್‌ಡಿಎ ಅಧಿಕಾರಕ್ಕೆ ಮರಳು ತವಕದಲ್ಲಿದೆ.

ಅಸ್ಸಾಂನಲ್ಲಿ ಬಿಜೆಪಿ ಸತತ ಮೂರನೇ ಬಾರಿಗೆ ಅಧಿಕಾರ ಹಿಡಿಯುವ ವಿಶ್ವಾಸದಲ್ಲಿ ಅಧಿಕಾರ ಕಸಿಯಲು ಕಾಂಗ್ರೆಸ್ ಇನ್ನಿಲ್ಲದ ಪ್ರಯತ್ನ ನಡೆಸಿದೆ. ಅದೇ ರೀತಿ ಪುದುಚೆರಿಯಲ್ಲಿ ಎನ್ ಆರ್ ಕಾಂಗ್ರೆಸ್‌ನ ರಂಗಸ್ವಾಮಿ ಆಡಳಿತ ಮತ್ತೊಮ್ಮೆ ಉಳಿಸಿಕೊಳ್ಳಲು ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿದ್ದು ಕಾಂಗ್ರೆಸ್ ಅಧಿಕಾರ ಕಸಿಯುವ ಪ್ರಯತ್ನ ನಡೆಸಿದೆ.

722 ಅಭ್ಯರ್ಥಿಗಳು ಕಣದಲ್ಲಿ

ಅಸ್ಸಾಂನಲ್ಲಿ 126 ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯುತ್ತಿದ್ದು722 ಅಭ್ಯರ್ಥಿಗಳ ಕಣದಲ್ಲಿದ್ದು 2.5 ಕೋಟಿಗೂ ಹೆಚ್ಚು ಮತದಾರರು ಅಸ್ಸಾಂ ಮುಖ್ಯಮಂತ್ರಿ ಹಿಮಾಂಶು ಬಿಸ್ವಾಸ್ ಶರ್ಮಾ ಸೇರಿದಂತೆ ಘಟಾನುಘಟಿ ನಾಯಕರ ಭವಿಷ್ಯ ಇಂದು ನಿರ್ಧಾರಿಸಲಿದ್ದಾರೆ.

ಅವರ ರಾಜಕೀಯ ಹಣೆಬರೆಹ ನಿರ್ಧರಿಸಲಿದ್ದಾರೆ

ಬೆಳಗ್ಗೆ 7 ಗಂಟೆಗೆ ಮತದಾನ ಶುರವಾಗಿದೆ. ಬಿಜೆಪಿ ನೇತೃತ್ವದ ಎನ್‌ಡಿಎ ಸತತ ಮೂರನೇ ಅವಧಿಗೆ ಅಧಿಕಾರ ಹಿಡಿಯಲು ಸತತ ಪ್ರಯತ್ನ ಮಾಡಿದೆ. ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟದಲ್ಲಿ ರೈಜೋರ್ ದಳ ಮತ್ತು ಸಿಪಿಐ(ಎಂ) ಅಸ್ಸಾಂನಲ್ಲಿ ಅಧಿಕಾರ ಹಿಡಿಯಲು ಪ್ರಯತ್ನಿಸುತ್ತಿದೆ.

2,50,54,463 ಮತದಾರರಲ್ಲಿ, 1,25,31,552 ಪುರುಷ ಮತದಾರರು ಮತ್ತು 1,25,22,593 ಮಹಿಳೆಯರು. 318 ತೃತೀಯ ಲಿಂಗಿಗಳು ಮತ್ತು 63,423 ಸೇವಾ ಮತದಾರರಿದ್ದಾರೆ.

ವಿಧಾನಸಭಾ ಚುನಾವಣೆಗೆ ಮುಂಚಿತವಾಗಿ ಮತದಾನದ ತಂಡಗಳು ಐವಿಎಂಗಳು ಮತ್ತು ವಿವಿಪ್ಯಾಟ್‌ಗಳೊಂದಿಗೆ ಮತಗಟ್ಟೆಗಳಿಗೆ ತೆರಳಿದ್ದವು. ಈಗ ಬೆಳಗ್ಗೆಯಿಂದಲೇ ಮತದಾರರು ಉದ್ದನೆಯ ಸಾಲಿನಲ್ಲಿ ನಿಂತು ಮೊದಲ ಬಾರಿಗೆ ಮತ ಚಲಾಯಿಸುತ್ತಿರುವ ಯುವಕರು ಉತ್ಸಾದಿಂದ ತಮ್ಮ ಹಕ್ಕು ಚಲಾಯಿಸುತ್ತಿರು ದೃಶ್ಯ ಕಂಡುಬಂತು.

16,000 ಸಿಬ್ಬಂದಿ, 1,700 ಮತಗಟ್ಟೆಗಳಲ್ಲಿ ಸುಮಾರು 4,000 ಪೊಲೀಸ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ, ಅವರಿಗೆ ಎರಡು ಕಂಪನಿಗಳ ಸಿಎಪಿಎಫ್ ಮೀಸಲು ಇಡಲಾಗಿದೆ ಎಂದು.

30 ಕ್ಷೇತ್ರಗಳಿಗೆ ಮತದಾನ

ಕೇಂದ್ರಾಡಳಿತ ಪ್ರದೇಶ ಪುದುಚೇರಿಯಲ್ಲಿ, ಎಲ್ಲಾ 30 ವಿಧಾನಸಭಾ ಸ್ಥಾನಗಳಿಗೆ ಮತದಾನ ನಡೆಯುತ್ತಿದೆ. ಮುಖ್ಯಮಂತ್ರಿ ಎನ್.ರಂಗಸ್ವಾಮಿ ಸೇರಿದಂತೆ ಒಟ್ಟು 294 ಅಭ್ಯರ್ಥಿಗಳು ಕಣದಲ್ಲಿದ್ದಾರೆ.

ಅಖಿಲ ಭಾರತ ಎನ್‌ಆರ್ ಕಾಂಗ್ರೆಸ್ ನೇತೃತ್ವದ ಆಡಳಿತಾರೂಢ ಎನ್‌ಡಿಎ, ಕಾಂಗ್ರೆಸ್–ಡಿಎಂಕೆ ಮೈತ್ರಿಕೂಟವನ್ನು ಎದುರಿಸುತ್ತಿದೆ. ಸುಮಾರು 9.5 ಲಕ್ಷ ಮತದಾರರು ಮತ ಚಲಾಯಿಸಲು ಅರ್ಹರಾಗಿದ್ದಾರೆ. 1,000ಕ್ಕೂ ಹೆಚ್ಚು ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ.

ಕೇರಳಂ ರಾಜ್ಯದಲ್ಲೂ ಡಳಿತರೂಢ ಎಲ್‌ಡಿಎಫ್ ಮತ್ತು ಕಾಂಗ್ರೆಸ್ ನೇತೃತ್ವದ ಯುಡಿಎಫ್ ನಡುವೆ ಚುನಾವಣೆ ಪೈಪೋಟಿ ಇದ್ದು ಎಡ ಪಕ್ಷಗಳ ನೇತೃತ್ವದ ಯುಡಿಫ್ ಚುನಾವಣೆ ಗೆದ್ದು ಹ್ಯಾಟ್ರಿಕ್ ಬಾರಿಸುವ ದವಕದಲ್ಲಿದ್ದರೆ ವಿರೋಧ ಪಕ್ಷವಾದ ಕಾಂಗ್ರೆಸ್ ಮತ್ತೆ ಅಧಿಕಾರ ಗದ್ದುಗೆ ಇರುವ ಹರಸಾಹಸ ನಡೆಸಿದೆ

# ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು: ಪ್ರಿಯಾಂಕ್ ವಿಶ್ವಾಸ



**ಕಲಬುರಗಿ,ಏ 9:** ದಾವಣಗೆರೆ ಹಾಗೂ ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಹೆಚ್ಚಿನ ಮತಗಳ ಅಂತದರಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ವಿಶ್ವಾಸ ವ್ಯಕ್ತಪಡಿಸಿದರು.

ತಮ್ಮನ್ನು ಭೇಟಿ ಮಾಡಿದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಶಾಮನೂರು ಶಿವಶಂಕರಪ್ಪ ಅವರ ಸಮಾಜಿಕ ಹಾಗೂ ಜನಪರ ಕೆಲಸಗಳು ಸಮರ್ಥ ಅವರು ಗೆಲ್ಲಲಿದ್ದಾರೆ. ಹಾಗೆ, ಬಾಗಲಕೋಟೆಯಲ್ಲಿ ಮೇಟಿ ಅವರು ಗೆಲ್ಲಲಿದ್ದಾರೆ ಎಂದರು.

ನಮಗೆ ಇರುವ ಮಾಹಿತಿ ಪ್ರಕಾರ ಹಾಗೂ ಮಾಧ್ಯಮಗಳ ವರದಿಗಳ ಪ್ರಕಾರ, ಎರಡೂ ಕ್ಷೇತ್ರಗಳಲ್ಲಿ ನಾವು ಗೆಲುವು ಸಾಧಿಸಲಿದ್ದೇವೆ ಎಂದು ಪುನರುಚ್ಚರಿಸಿದರು.

ಸಿಎಂ ಆಗಮನ:

ಏ.11 ರಂದು ಸಿಎಂ ಸಿದ್ದರಾಮಯ್ಯ ನವರು ಬೀದರ್ ನಲ್ಲಿ ನಡೆಯಲಿರುವ ಪತ್ರಕರ್ತರ ಸಮ್ಮೇಳನದಲ್ಲಿ ಭಾಗವಹಿಸಿ ನಂತರ ಚಿತ್ತಾಪುರ ತಾಲೂಕಿನ ಸೂಗೂರು ಗ್ರಾಮದಲ್ಲಿ ನಿರ್ಮಾಣವಾಗಿರುವ ನೂತನ ದೇವಾಲಯ ಉದ್ಘಾಟನೆ ನೆರವೇರಿಸಲಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ಇದೇ ಸಂದರ್ಭದಲ್ಲಿ ತಿಳಿಸಿದರು.

# ಖರ್ಗೆ ಪ್ರಚೋದನಕಾರಿ ಮಾತಾಡಿಲ್ಲ: ಜಗದೇವ ಗುತ್ತೇದಾರ



**ಕಲಬುರಗಿ,ಏ.9:** ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಸುಮಾರು 7 ದಶಕಗಳ ರಾಜಕೀಯದಲ್ಲಿ ಎಂದೂ ಪ್ರಚೋದನಕಾರಿ ಭಾಷಣ ಮಾಡಿ ಕೋಮುವಾದಿ ವಿಷಬೀಜ ಬಿತ್ತಿದವರಲ್ಲ. ಇಂತಹ ಅನುಭವಿ ಹಿರಿಯ ರಾಜಕಾರಣಿಯ ವಿರುದ್ಧ ಬಿಜೆಪಿ ನಾಯಕರಾದ ಚಲವಾದಿ ನಾರಾಯಣಸ್ವಾಮಿ, ಸಿ.ಟಿ. ರವಿ, ಪ್ರತಾಪಸಿಂಹ, ಆರ್. ಅಶೋಕ, ಪ್ರಲ್ಹಾದ ಜೋಷಿ ಇನ್ನಿತರರು ನಾಲಿಗೆಗೆ ಹತೋಟಿ ಇಲ್ಲದೆ ಬಾಯಿಗೆ ಬಂದಂತೆ ಶಬ್ದಗಳನ್ನು ಉಪಯೋಗಿಸಿ ಮಾತನಾಡಿರುವದು ಖಂಡನೀಯ. ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಜಗದೇವ ಗುತ್ತೇದಾರ ಕಾಳಗಿ ಹೇಳಿದ್ದಾರೆ.

ಪ್ರಚೋದನಕಾರಿ ಮಾತನಾಡುವದು ಭಾಷಣ ಮಾಡುವದು ಮತ್ತು ಕೋಮುವಾದಿ ವಿಷಬೀಜ ಬಿತ್ತುವದು ಬಿಜೆಪಿ ನಾಯಕರ ಲಕ್ಷಣವಾಗಿದೆ, ಜಾತಿ ಜಾತಿಗಳ ಮಧ್ಯೆ ಜಗಳ ಹಚ್ಚುವದು ಹೊಡೆಬಡೆ, ಕೊಲ್ಲು ಎನ್ನುವದು ಬಿಜೆಪಿಯ ನಾಯಕರ ಮೂಲ ಮಂತ್ರವಾಗಿದೆ ಎಂದಿದ್ದಾರೆ.

# ಯಶಸ್ವಿನಿ ಅವರ ಭರತನಾಟ್ಯ ರಂಗಪ್ರವೇಶ



**ಬೆಂಗಳೂರು,ಏ 9:**ಬೆಂಗಳೂರಿನಲ್ಲಿ ಯಶಸ್ವಿನಿ ಅವರ ಭರತನಾಟ್ಯ ರಂಗಪ್ರವೇಶ ಯಶಸ್ವಿಯಾಗಿ ಜರುಗಿತು.

ಈ ರಂಗಪ್ರವೇಶ ಯಶಸ್ವಿನಿ ಅವರ ಕಲಾತ್ಮಕ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲನ್ನು ಗುರುತಿಸುತ್ತದೆ. ಮುಂಬರುವ ವರ್ಷಗಳಲ್ಲಿ ಭರತನಾಟ್ಯ ಮಾರ್ಗಕ್ಕೆ ಸಮರ್ಪಿತರಾಗಿ, ಸಮರ್ಪಣೆ, ಅನುಗ್ರಹ ಮತ್ತು ನಿರಂತರವಾಗಿ ಬೆಳೆಯುತ್ತಿರುವ ಉತ್ಸಾಹದಿಂದ ಈ ಕಾಲಾತೀತ ಕಲಾ ಪ್ರಕಾರದ ಅನ್ವೇಷಣೆಯನ್ನು ಮುಂದುವರಿಸಲು ಅವರು ಎದುರು ನೋಡುತ್ತಿದ್ದಾರೆ.

ಸುಬ್ಬಣ್ಣ ಎಸ್ ಮತ್ತು ಕವಿತಾ ಎಚ್.ಬಿ. ಅವರ ಪುತ್ರಿ ಯಶಸ್ವಿನಿ ಎಸ್ ಅವರು ಪ್ರತಿಷ್ಠಿತ ವಿಶ್ವವಿದ್ಯಾಲಯದ ವಿಶ್ವೇಶ್ವರಯ್ಯ ಕಾಲೇಜ್ ಆಫ್ ಎಂಜಿನಿಯರಿಂಗ್‌ನಿಂದ 2025 ರ ಬ್ಯಾಚ್‌ನ ಭಾಗವಾಗಿ ಮೆಕ್ಯಾನಿಕಲ್ ಎಂಜಿನಿಯರಿಂಗ್‌ನಲ್ಲಿ ಬ್ಯಾಚುಲರ್ ಆಫ್ ಟೆಕ್ನಾಲಜಿಯನ್ನು ಪೂರ್ಣಗೊಳಿಸಿದರು. ಯಶಸ್ವಿನಿ ಆರನೇಯ ವಯಸ್ಸಿನಿಂದಲೂ ಭರತನಾಟ್ಯ ಶಾಸ್ತ್ರೀಯ ಕಲಾ ಪ್ರಕಾರದಲ್ಲಿ ತರಬೇತಿ ಪಡೆಯುತ್ತಿದ್ದಾರೆ. ಪ್ರಸ್ತುತ ಅವರ ಗುರು ಡಾ. ಸಂಜಯ್ ಶಾಂತಾರಾಮ್ ಅವರ ಬಳಿ ನೃತ್ಯ ಶಿಕ್ಷಣ ಪಡೆಯುತ್ತಿದ್ದಾರೆ. ಅವರು 2018 ರಲ್ಲಿ ಶಿವಪ್ರಿಯ ನೃತ್ಯ ಶಾಲೆಯನ್ನು ಸೇರಿದರು ಮತ್ತು 2019ರನವೆಂಬರ್ 29 ರಂದು ಎಡಿಎ ರಂಗ ಮಂದಿರದಲ್ಲಿ ತಮ್ಮ ಗೆಜ್ಜೆ ಪೂಜೆಯನ್ನು ಪ್ರದರ್ಶಿಸಿದರು. ಅವರು ನೃತ್ಯಾಂತರ, ಹಂಪಿ ಉತ್ಸವ, ಕಿಂಕಿಣಿ ಉತ್ಸವ ಮತ್ತು ನಾಟ್ಯ ಸಂಧ್ಯಾ ಸೇರಿದಂತೆ ಹಲವಾರು ಪ್ರತಿಷ್ಠಿತ ವೇದಿಕೆಗಳಲ್ಲಿ ಪ್ರದರ್ಶನ ನೀಡಿದ್ದಾರೆ. ಅವರು 2024 ರಲ್ಲಿ ನಡೆದ 49 ನೇ ಅಖಿಲ ಭಾರತ ಸಂಗೀತ ಮತ್ತು ನೃತ್ಯ ಸ್ಪರ್ಧೆಗಳು ಸೇರಿದಂತೆ ವಿವಿಧ ನೃತ್ಯ ಸ್ಪರ್ಧೆಗಳಲ್ಲಿ ಭಾಗವಹಿಸಿದ್ದಾರೆ. 2025 ರಲ್ಲಿ, ಮೈಸೂರಿನ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯವು ನಡೆಸಿದ ಭರತನಾಟ್ಯ ಹಿರಿಯ ವಿಭಾಗದ ಪರೀಕ್ಷೆಯಲ್ಲಿ ಅವರು ಅತ್ಯುತ್ತಮವಾಗಿ ಶೇ.93 ಅಂಕಗಳನ್ನು ಗಳಿಸಿದರು.

ನೃತ್ಯದ ಹೊರತಾಗಿ, ಯಶಸ್ವಿನಿ ತಮ್ಮ ಹತ್ತನೇ ವಯಸ್ಸಿನಿಂದಲೂ ತಮ್ಮ ಗುರುಗಳಾದ ವಿದ್ಯಾ ಕೃಷ್ಣಮೂರ್ತಿ ಅವರ ಮಾರ್ಗದರ್ಶನದಲ್ಲಿ ಕರ್ನಾಟಕ ಗಾಯನ ಸಂಗೀತ ಮತ್ತು ವೀಣೆಯಲ್ಲಿ ತರಬೇತಿ ಪಡೆದಿದ್ದಾರೆ

ಅವರು ಕೆಂಪೇಗೌಡ, ಮತ್ಸ್ಯಕನ್ಯ, ರಾಜಸಿಂಹ, ಹನುಮಾನ್, ತಾಂಡವ, ಮಹಾಭಾರತ, ಒಡೆಯರ ವೈಭವ, ಚಂದ್ರಲೇಖ ಮತ್ತು ರೂಪ ವಿರೂಪ ಸೇರಿದಂತೆ ಹಲವಾರು ನೃತ್ಯ ನಿರ್ಮಾಣಗಳಲ್ಲಿ ಭಾಗವಹಿಸಿದ್ದಾರೆ. 2023 ರಲ್ಲಿ ಮಲೇಷ್ಯಾದ ಕೌಲಾಲಂಪುರದಲ್ಲಿ ನಡೆದ ಸಾಂಸ್ಕೃತಿಕ ವಿನಿಮಯ ಕಾರ್ಯಕ್ರಮ ಮತ್ತು 2025 ರಲ್ಲಿ ಬಾಲಿಯಲ್ಲಿ ನಡೆದ ಅಂತರರಾಷ್ಟ್ರೀಯ ಸಾಂಸ್ಕೃತಿಕ ಉತ್ಸವ ಸೇರಿದಂತೆ ಹಲವು ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಪಾಲ್ಗೊಂಡಿದ್ದಾರೆ.ತಮ್ಮ ಬಿಡುವಿನ ವೇಳೆಯಲ್ಲಿ, ಅವರು ಚಿತ್ರಕಲೆ, ಬೇಕಿಂಗ್, ಈಜು, ಬ್ಯಾಡ್ಮಿಂಟನ್, ಛಾಯಾಗ್ರಹಣ, ಓದುವುದು ಮತ್ತು ಹೊಸ ಭಾಷೆಗಳನ್ನು ಕಲಿಯುವುದನ್ನು ಆನಂದಿಸುತ್ತಾರೆ.

# ಲಂಚ ಪಡೆದ ಗ್ರಾಮಲೆಕ್ಕಾಧಿಕಾರಿಗೆ 4 ವರ್ಷ ಜೈಲು



**ಕಲಬುರಗಿ,ಏ 9:** ಲಂಚ ಸ್ವೀಕರಿಸಿದ ಪ್ರಕರಣದಲ್ಲಿ ಗ್ರಾಮ ಲೆಕ್ಕಾಧಿಕಾರಿಗೆ 4 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 20 ಸಾವಿರ ರೂ ದಂಡ ವಿಧಿಸಿ ಜಿಲ್ಲಾ ಪ್ರಧಾನ ಮತ್ತು ವಿಶೇಷನ್ಯಾಯಾಲಯ ತೀರ್ಪು ನೀಡಿದೆ.

2017ರಲ್ಲಿ ಜೇವರಗಿ ತಾಲೂಕಿನ ಕಟ್ಟಿಸಂಗಾವಿ ಗ್ರಾಮದ ಗ್ರಾಮ ಲೆಕ್ಕಾಧಿಕಾರಿಯಾಗಿದ್ದ ಸೂರ್ಯಕಾಂತ ಜಮಾದಾರ ಶಿಕ್ಷೆಗೆ ಗುರಿಯಾದ ಅಪರಾಧಿ. ಜಮೀನಿನ ಋಣಭಾರದ ಹೆಸರು ತೆಗೆಯಲು ಈತ ಲಂಚ ತೆಗೆದುಕೊಂಡಿದ್ದ. ಪ್ರಕರಣದ ವಾದ ವಿವಾದ ಆಲಿಸಿದ ಜಿಲ್ಲಾ ಪ್ರಧಾನ ಮತ್ತು ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಜಿ.ಎಲ್.ಲಕ್ಷ್ಮಿನಾರಾಯಣ ಅವರು ಅಪರಾಧಿಗೆ 4 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 20 ಸಾವಿರ ರೂ. ದಂಡ ವಿಧಿಸಿ ಆದೇಶ ಹೊರಡಿಸಿದ್ದಾರೆ. ವಿಶೇಷ ಸರಕಾರಿ ಅಭಿಯೋಜಕ ಅಶೋಕ ಎಸ್. ಚಾಂದಕವಠೆ ವಾದ ಮಂಡಿಸಿದ್ದರು. ಪಿಐ ಕೆ.ಎಸ್.ಕಲ್ಲದೇವರು ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಘಟನೆಯ ಹಿನ್ನೆಲೆ:

ಕಟ್ಟಿ ಸಂಗಾವಿ ಗ್ರಾಮದ ಹಣಮಂತ ಶಿವರಾಯ ತಳವಾರ ದೂರು ನೀಡಿದ್ದರು. ದೂರುದಾರನ ತಂದೆಯ ಹೆಸರಿನಲ್ಲಿನ ಇನಾಮು ಜಮೀನಿನ ಪಹಣಿಯಲ್ಲಿ ಕಾಲಂನಂ 11ರಲ್ಲಿ ಋಣಭಾರ ಸಹಾಯಕ ಆಯುಕ್ತರ ಹೆಸರು ಇತ್ತು. ಅದನ್ನು ತೆಗೆಯಲು ಗ್ರಾಮ ಲೆಕ್ಕಾಧಿಕಾರಿಗೆ ಮನವಿ ಮಾಡಿದ್ದರು. ಕೆಲಸ ಮಾಡಿಕೊಡಲು 15 ಸಾವಿರ ರೂ. ಲಂಚದ ಬೇಡಿಕೆ ಇಟ್ಟಿದ್ದರು. ಅದರಲ್ಲಿ ಮೊದಲಿಗೆ 6 ಸಾವಿರ ರೂ ಲಂಚ ತೆಗೆದುಕೊಂಡಿದ್ದರು. ಉಳಿದ9 ಸಾವಿರರೂ.ಗಳನ್ನು ಜೇವರಗಿ ಮಿನಿ ವಿಧಾನಸೌಧದ ಟೀ ಸ್ಟಾಲ್‌ನಲ್ಲಿ ಲಂಚ ಪಡೆಯುವಾಗ ಆ ವೇಳೆಯ ಎಸಿಬಿ ಅಧಿ ಕಾರಿಗಳು ದಾಳಿ ನಡೆಸಿ ಬಂಧಿಸಿದ್ದರು.

# ಸ್ವಾಮೀಜಿಯಿಂದ ಮಹಿಳೆ ಹಾಗೂ ಇತರರ ಮೇಲೆ ದೂರು ದಾಖಲು: ಸತ್ಯ ಹೊರಬರಲಿ: ಎಂಬಿಪಿ ಆಶಯ



**ವಿಜಯಪುರ, ಏ. 9:**ಬಸವ ಜಯಮೃತ್ಯುಂಜಯ ಸ್ವಾಮೀಜಿಯಿಂದ ಮಹಿಳೆ ಹಾಗೂ ಇತರರ ಮೇಲೆ ದೂರು ಕುರಿತು ನಾನು ಕಾಮೆಂಟ್ ಮಾಡಲ್ಲ. ಅದನ್ನು ಕಾನೂನು ನೋಡಿಕೊಳ್ಳುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ತಿಳಿಸಿದರು.

ಮಹಿಳೆಯಿಂದ ಸ್ವಾಮೀಜಿ ಮೇಲೆ ಲೈಂಗಿಕ ದೌರ್ಜನ್ಯ ಆರೋಪ ವಿಚಾರ ಕುರಿತು ಅವರು ನಗರದಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದರು.

ಕಾನೂನು ಪ್ರಕಾರ ಕ್ರಮವಾಗಲಿ. ಸತ್ಯವೋ, ಅಸತ್ಯವೋ ಎನ್ನುವ ಬಗ್ಗೆ ತನಿಖೆ ಆಗಲಿ. ಕಾನೂನು ಕ್ರಮ ಕೈಗೊಳ್ಳುತ್ತದೆ. ನಮಗೂ ಇದಕ್ಕೂ ಸಂಬಂಧ ಇಲ್ಲ. ಇದರ ಬಗ್ಗೆ ನಾವು ಕಮೆಂಟ್ ಮಾಡಲು ಬರಲ್ಲ ಎಂದರು.

ಕಾನೂನು ಇದೆ. ಆ ಕಾನೂನು ಪ್ರಕಾರ ಸತ್ಯ, ಅಸತ್ಯ ಹೊರ ಬರಬೇಕು ಎಂದು ಅವರು ನುಡಿದರು.

# ವಾಸೋದ್ಯಮದಲ್ಲಿ ವ್ಯಾಪಕ ಉದ್ಯೋಕಾವಕಾಶ: ಪ್ರೊ. ಬಟ್ಟು ಸತ್ಯನಾರಾಯಣ

**ಕಲಬುರಗಿ,ಏ.9:** ಪ್ರವಾಸೋದ್ಯಮ ವಲಯವು ವ್ಯಾಪಕ ಉದ್ಯೋಗಾವಕಾಶಗಳನ್ನು ಹೊಂದಿದೆ, ಆದ್ದರಿಂದ ವಿದ್ಯಾರ್ಥಿಗಳು ಉದ್ಯೋಗಾಕಾಂಕ್ಷಿಗಳಾಗುವುದಕ್ಕಿಂತ ಹೆಚ್ಚಾಗಿ ಉದ್ಯೋಗ ಸೃಷ್ಟಿಕರ್ತರಾಗಬೇಕು ಎಂದು ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ಅವರು ಸಿಯುಕೆಯ ಪ್ರವಾಸೋದ್ಯಮ ಮತ್ತು ಹೋಟೆಲ್ ನಿರ್ವಹಣಾ ವಿಭಾಗ ಆಯೋಜಿಸಿದ್ದ ಪ್ರವಾಸೋದ್ಯಮದಲ್ಲಿ ಡಿಜಿಟಲ್ ತಂತ್ರಜ್ಞಾನ ಪ್ರದರ್ಶನವನ್ನು ಉದ್ಘಾಟಿಸಿದ ನಂತರ ಮಾತನಾಡುತ್ತಿದ್ದರು. ಅವರು ಮುಂದುವರೆದು ಮಾತನಾಡಿ ಪ್ರವಾಸೋದ್ಯಮ ಕ್ಷೇತ್ರವು ಭಾರತದ ಜಿಡಿಪಿಗೆ ಗಣನೀಯ ಕೊಡುಗೆ ನೀಡುತ್ತಿದೆ. ಎಐ ಮತ್ತು ಡಿಜಿಟಲ್ ತಂತ್ರಜ್ಞಾನವು ಉದ್ಯೋಗವನ್ನು ಕಸಿದುಕೊಳ್ಳುವ ಬದಲು ಹೆಚ್ಚಿನ ಉದ್ಯೋಗವನ್ನು ಸೃಷ್ಟಿಸುತ್ತದೆ. ಉದ್ಯಮಕ್ಕೆ ನವೀನ ಅಭ್ಯಾಸಗಳು ಮತ್ತು ಕೌಶಲ್ಯದ ಅಗತ್ಯವಿದೆ. ಆದ್ದರಿಂದ ಉತ್ತಮ ಅವಕಾಶಗಳಿಗಾಗಿ ಉದ್ಯಮ ಸಿದ್ಧ ಕೌಶಲ್ಯಗಳನ್ನು ಅಳವಡಿಸಿಕೊಳ್ಳಿ. ಪ್ರವಾಸೋದ್ಯಮವು ಸೇವಾ ಉದ್ಯಮವಾಗಿರುವುದರಿಂದ ಜನರನ್ನು ನಿರ್ವಹಿಸುವುದು ಅತ್ಯಂತ ಸವಾಲಿನದ್ದಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ಮಾನವ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು ಹೇಳಿದರು.

ವಿದ್ಯಾರ್ಥಿಗಳು ರೋಬೋಟ್ ಸ್ವಾಗತಕಾರ, ರೋಬೋಟ್ ಸರ್ವರ್, ಜಿಯೋ ಫೆನ್ಸಿಂಗ್, ಜಿಪಿಎಸ್ ಆಧಾರಿತ ಸಂಚಾರ ನಿರ್ವಹಣೆ ಮತ್ತು ಪಾರ್ಕಿಂಗ್, ಥ್ರೀಡಿ ಕ್ಯಾಂಪಸ್ ಪ್ರವಾಸ, ಎಐ ಆಧಾರಿತ ಪ್ರಯಾಣ ಯೋಜನೆ, ಕ್ಯೂಆರ್ ಕೋಡ್ ಆಧಾರಿತ ಗಮ್ಯಸ್ಥಾನ ಮಾಹಿತಿ ವ್ಯವಸ್ಥೆ, ಸೌರ ಫಲಕ ಬೆಂಚುಗಳು, ಹೊಲೊಗ್ರಾಮ್ ವರ್ಚುವಲ್ ಪ್ರವಾಸೋದ್ಯಮ, ಸುಸ್ಥಿರ ಪ್ರವಾಸೋದ್ಯಮ ಅಭಿವೃದ್ಧಿ, ಡಿಜಿಟಲ್ ಟೆಲ್ಲರ್ ಯಂತ್ರ ಮತ್ತು ಪ್ರವಾಸಿಗರಿಗೆ ಪೌಷ್ಟಿಕ ಆಹಾರದ ಮಾದರಿಗಳನ್ನು



ಪ್ರದರ್ಶಿಸಿದರು.ಪ್ರವಾಸೋದ್ಯಮ ಮತ್ತು ಹೋಟೆಲ್ ನಿರ್ವಹಣಾ ವಿಭಾಗದ ಮುಖ್ಯಸ್ಥ ಡಾ. ಮಹೇಂದ್ರ ಜಿ ಸ್ವಾಗತಿಸಿದರು. ಕಾರ್ಯಕ್ರಮದ ಸಂಯೋಜಕ ಡಾ.ಶಿವ ಎಂ ವಂದಿಸಿದರು.

ಈ ಸಂದರ್ಭದಲ್ಲಿ ಸ್ಕೂಲ್ ಆಫ್ ಬಿಸಿನೆಸ್ ಸ್ಟಡೀಸ್ ಡೀನ್ ಪ್ರೊ.ಪಾಂಡುರಂಗ ವಿ ಪತ್ತಿ, ಪ್ರೊ.ಅಂಕತಿ ರಘು, ಡಾ.ಡಿ.ಗೌತಮ್, ಡಾ.ನವೀನ್, ಡಾ.ನಟರಾಜ್ ಪಟ್ಟೇಡ್, ಡಾ.ಜಗದೀಶ್ ಬಿರಾದಾರ್, ಡಾ.ಗಣಪತಿ ಬಿ ಸಿನ್ನೂರ್, ಡಾ.ಶಿವಾನಂದ ಬಂಟನೂರ, ಡಾ.ರಂಗನಾಥಂ, ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೌಳೂರು ಗ್ರಾಮದಲ್ಲಿ ಹಜರತ್ ಸೈಯದ್ ಶಹಾಹುಸೇನ್ ಬಾಷಾ ದರ್ಗಾ ಜಾತ್ರೆ ಭಕ್ತಿಭಾವದಿಂದ ಆಚರಣೆ



**ಯಾದಗಿರಿ:ಏ.9:** ತಾಲ್ಲೂಕಿನ ಕೌಳೂರು ಗ್ರಾಮದಲ್ಲಿ ಹಜರತ್ ಸೈಯದ್ ಶಹಾಹುಸೇನ್ ಬಾಷಾ ದರ್ಗಾ ಜಾತ್ರೆ ಇಂದು ಭಕ್ತಿಭಾವ ಹಾಗೂ ಸಾಂಪ್ರದಾಯಿಕ ಉತ್ಸಾಹದೊಂದಿಗೆ ನಡೆಯಿತು.

ಜಾತ್ರೆಯ ಹೃದಯ ಭಾಗವೆಂದೇ ಪರಿಗಣಿಸಲ್ಪಡುವ ಗಂಧದ ಮೆರವಣಿಗೆ ರಾತ್ರಿ 11 ಗಂಟೆಗೆ ಆರಂಭಗೊಂಡು, ಬೆಳಗಿನ ಜಾವ 4 ಗಂಟೆಯವರೆಗೆ ನಿರಂತರವಾಗಿ ಭಕ್ತಿಸಾಗರದ ನಡುವೆ ಸಾಗಿತು. ರಸೂಲ್ ಸಾಬ್ ಅವರ ಮನೆಯಿಂದ ಆರಂಭವಾದ ಈ ವೈಭವಮಯ ಮೆರವಣಿಗೆ ದರ್ಗಾವರೆಗೆ ಭಕ್ತರ ಘೋಷಣೆಗಳು, ಧಾರ್ಮಿಕ ಗೀತೆಗಳು, ತಾಳಮದ್ದಲೆಗಳ ನಾದ ಮತ್ತು ಆಧ್ಯಾತ್ಮಿಕ ಮೆರಗುಗಳಿಂದ ಸಂಪೂರ್ಣ ಪ್ರದೇಶವೇ ಭಕ್ತಿ ಮಯವಾಗುವಂತೆ ಮಾಡಿತು.

ಮೆರವಣಿಗೆಯಲ್ಲಿ ರಸೂಲ್ ಸಾಬ್, ಮೈನೊದಿನ್, ನವಾಬ್ ಸಾಬ್, ಅಮೀನ್ ಬಾಷಾ, ಹುಸೇನ್, ಸಾಬಣ್ಣ ಪಟೇದಾರ್, ನಿಂಗರೆಡ್ಡಿ, ಬಸಪ್ಪ, ಮಲ್ಲಯ್ಯ ಪಟೇದಾರ್, ಶಿವರಾಜ್, ಶರಣಪ್ಪ ಗಡ್ಡೆಸುಗೂರ್, ಮಲ್ಲಯ್ಯ ಡೋಂಗರ್, ರಾಚಪ್ಪ ದೊರೆ, ಶಿವಪ್ಪ ಡೋಂಗರ್, ಶರಣಪ್ಪ ಹಾಗೂ ಸಿದ್ದಪ್ಪ ನಾಯ್ಕೋಡಿ ಸೇರಿದಂತೆ ಊರಿನ ಅನೇಕ ಗಣ್ಯರು ಮತ್ತು ಭಕ್ತರು ಪಾಲ್ಗೊಂಡಿದ್ದರು.ಜಾತ್ರೆಯು ಶಾಂತಿ, ಸಹೋದರತ್ವ ಮತ್ತು ಸಾಮರಸ್ಯದ ಸಂಕೇತವಾಗಿ ಗ್ರಾಮದಲ್ಲಿ ಹರ್ಷೋಲ್ಲಾಸದ ವಾತಾವರಣವನ್ನು ನಿರ್ಮಿಸಿತು.

# ನೀರಿನ ಸಮಸ್ಯೆ ಪತ್ರಿಕೆಗಳಲ್ಲಿ ಸುದ್ದಿ ಬಂದರೆ ಅಲ್ಲಿನ ಪಿಡಿಒ ಸಸ್ಪೆಂಡ್: ಸಚಿವ ಡಾ.ಶರಣಪ್ರಕಾಶ ಪಾಟೀಲ್ ಊಡಗಿ



**ಸೇಡಂ, ಏ,09:** ಸೇಡಂ ಹಾಗೂ ಸೇಡಂ ಮತಕ್ಷೇತ್ರ ಚಿಂಚೋಳಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳಲ್ಲಿ ನೀರಿನ ಸಮಸ್ಯೆಗಳು ಪತ್ರಿಕೆಗಳಲ್ಲಿ ಸುದ್ದಿ ಬಂದರೆ ಅಲ್ಲಿನ ಪಿಡಿಒಗಳು ಸಸ್ಪೆಂಡ್ ಮಾಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ್ ಊಡಗಿ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಆಡಳಿತಾಧಿಕಾರಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು.

ಇಲ್ಲಿನ ತಾಲೂಕಾ ಪಂಚಾಯತ್ ಸಭಾಂಗಣದಲ್ಲಿ ಸೇಡಂ ಹಾಗೂ ಸೇಡಂ ಮತಕ್ಷೇತ್ರ ಚಿಂಚೋಳಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳಲ್ಲಿ ನೀರಿನ ಸಮಸ್ಯೆ ಹಾಗೂ ಪರಿಹಾರಕ್ಕಾಗಿ ನಡೆದ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಪಂ ಆಡಳಿತಾಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತಾಲೂಕಿನ ಆಡಕಿಯಲ್ಲಿ ನೀರಿನ ಸಮಸ್ಯೆ ಇರುವುದರಿಂದ ಹೊಸಾ ಬೊರವೇಲ್ ಕೊರಸುವಂತೆ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು,ಬಟಗೇರ,ಬೆನಕನಹಳ್ಳಿ,ಮುಧೋಳ್, ಪಾಕಲ,ಸಕಲೇಶಪುರ, ಚಂದಪೂರ, ದುಗನೂರ, ದೇವನೂರು, ಕುರುಕುಂಟಾ,ಮದಕಲ,ಹಂದರಕಿ, ನೀಲಹಳ್ಳಿ ಕೋನಪೂರ, ಕೋಡ್ಲಾ, ಹಾಗೂ ಕುಕ್ಕುಂದಾ ಗ್ರಾಪಂನ ವ್ಯಾಪ್ತಿಯಲ್ಲಿನ ಎಸಿ ಏರಿಯಾಗಳಲ್ಲಿ ನೀರಿನ ಸಮಸ್ಯೆ ಇದೆ ಎಂದು ಸಚಿವರಿಗೆ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ತಿಳಿಸಿದರು.ತಹಸಿಲ್ದಾರ್ ಶ್ರೀಮತಿ ಶ್ರೀಯಾಂಕಾ ಎ ಧನಶ್ರೀ ಕೆಎಎಸ್, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಚನ್ನಪ್ಪ ರಾಯಣ್ಣನವರ, ಚಿಂಚೋಳಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಸುಬ್ಬಣ್ಣ ಜಮಖಂಡಿ ಇದ್ದರು. ಈ ವೇಳೆಯಲ್ಲಿ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಹಾಗೂ ಪಂಚಾಯತ್ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.

# ಮಿತಿಮೀರಿದ ಮದ್ಯ ಮಾರಾಟಗಾರರ ಅಟ್ಟಹಾಸ,ಮದ್ಯ ಪ್ರಿಯರಿಗೆ ಸಂಕಷ್ಟ !



**ಹೂ ಹಿಪ್ಪರಗಿ :ಏ.9:** ಬಸವನ ಬಾಗೇವಾಡಿಯಲ್ಲಿ ಮದ್ಯ ಮಾರಾಟಗಾರರ ಅಟ್ಟಹಾಸ ಮಿತಿಮಿರಿದೆ. ಹೆಚ್ಚಿನ ಬೆಲೆ ವಸೂಲಿ ಮಾಡಿ ಭರ್ಜರಿ ಕಮಾಯಿ ಮಾಡುತ್ತಾ ಇದ್ದಾರೆ. ಅದರಲ್ಲೂ ಸಿಎಲ್-2 ಮಳಿಗೆಯಲ್ಲಿ ಎಂಆಪಿ ಬೆಲೆ ನೀಡಬೇಕು ಎನ್ನುವ ಕಾನೂನು ಇದೆ. ಆದರೆ ಇಲ್ಲಿ ಮಾತ್ರ ಎಂಆರ್‌ಪಿಗಿಂತಲೂ 30-40 ರೂಪಾಯಿ ಹೆಚ್ಚಿಗೆ ವಸೂಲಿ ಮಾಡುತ್ತಾ ಇದ್ದಾರೆ. ರಾಜಾರೋಷವಾಗಿ ಹೆಚ್ಚಿನ ಬೆಲೆಗೆ ಮದ್ಯವನ್ನು ಮಾರಾಟ ಮಾಡುತ್ತಿದ್ದರೂ ಬಸವನ ಬಾಗೇವಾಡಿ ಅಬಕಾರಿ ಇಲಾಖೆ ಅಧಿಕಾರಿಗಳು ಮಾತ್ರ ಸುಮ್ಮನಿದೆ. ಸಿಎಲ್-2 ಶಾಪ್‌ನಲ್ಲಿ ಎಂಆರ್‌ಪಿಗಿಂತ ಒಂದು ಪೈಸೆ ಹೆಚ್ಚಿಗೆ ಪಡೆಯಬಾರದು ಎನ್ನುವ ಕಾನೂನು ಇದೆ. ಆದರೆ ಹೂವಿನ ಹಿಪ್ಪರಗಿ ಮದ್ಯದ ಅಂಗಡಿ ಮಾಲೀಕರುವ ಆಡಿದ್ದೇ ಆಟವಾಗಿದೆ. ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡುತ್ತಿರು ಹೂ ಹಿಪ್ಪರಗಿ ಪಟ್ಟಣದ ಸರ್ಕಲ್ ಹತ್ತಿರ ಇರುವ ಅನಂತಮ್ಮ.ಎನ್.ಅನ್ನಗೌನಿ ಲಕ್ಷ್ಮಿ ವೈನ್ ಶಾಪ್ ಲೈಸೆನ್ಸ್ ರದ್ದು ಮಾಡಬೇಕೆಂದು ಭೀಮ್ ಆರ್ಮಿ ಸಂವಿಧಾನ ರಕ್ಷಕ ದಳ ರಾಜ್ಯ ಸಂಘಟನಾ ಸಂಚಾಲಕ ಮಹಾಂತೇಶ ಹಾದಿಮನಿ ಮತ್ತು ಭೀಮ್ ಆರ್ಮಿ ಸಂಘಟನೆಯ ಕಾರ್ಯಕರ್ತರು ಅಬಕಾರಿ ಇಲಾಖೆಗೆ ಮನವಿ ನೀಡಿ ಒತ್ತಾಯ ಮಾಡಿದ್ದಾರೆ.

ಇಲ್ಲಿನ ಸಿಎಲ್-2 ಶಾಪ್ ಮಾಲೀಕರು ಅಬಕಾರಿ ನಿಯಮ ಸಂಪೂರ್ಣ ಗಾಳಿಗೆ ತೂರಿದರೂ ಅಬಕಾರಿ ಇಲಾಖೆ ಅಧಿಕಾರಿಗಳು ಕ್ರಮ ತೆಗೆದುಕೊಳ್ಳುತ್ತಿಲ್ಲ. ಸಿಎಲ್-2 ಕೌಂಟರ್ ಸೇಲ್ ಮಾತ್ರ ಮಾಡಬೇಕು. ಆದರೆ ಅಂಗಡಿ ಮಾಲೀಕರು ಪಕ್ಕದಲ್ಲೇ ಟೇಬಲ್ ಹಾಕಿ ಸರ್ವಿಸ್ ನೀಡುತ್ತಾರೆ. ಇದು ಕಾನೂನು ಬಾಹಿರ.ಃಕ ಪಾಕೀಟ್ ಮೇಲೆ 70 ರೂಪಾಯಿ ಇದೆ ಮಾಲೀಕರೇ 85ರೂಪಾಯಿ ಯಾಕೆ ? ತೆಗುದುಕೊಳ್ಳುತ್ತಿರಿ ಎಂದರೆ ಎ ನಿನಗೆ ಬೇಕಾದರೆ ತೆಗೆದುಕೊಳ್ಳು ಇಲ್ಲ ಅಂದ್ರೆ ಜಾಗ ಖಾಲಿ ಮಾಡು ಏನು ಮಾಡಿಕೊಳ್ಳುತ್ತಿ ಮಾಡ್ಕೋ ಹೋಗು ಎಂದು ಮದ್ಯ ಪ್ರೀಯರಿಗೆ ಅವಾಜ್ ಹಾಕುತ್ತಿದ್ದಾರೆ. ಮದ್ಯದ ಶಾಪ್ ಮಾಲೀಕರು ಮದ್ಯ ಪ್ರೀಯರಿಂದ ಹಗಲು ದರೋಡೆ ಮಾಡುತ್ತಿದ್ದಾರೆ. ಮದ್ಯ ಎಂಆರ್‌ಪಿ ದರಕ್ಕೆ ಮಾರಾಟ ಮಾಡಿದರೆ ಸರ್ಕಾರಕ್ಕೆ ನ್ಯಾಯಯುತವಾಗಿ ತೆರಿಗೆ ಹೋಗುತ್ತದೆ. ಆದರೆ ಈ ಮದ್ಯದ ಅಂಗಡಿ ಮಾಲೀಕರು ಹೆಚ್ಚಿನ ಬೆಲೆಗೆ ಮದ್ಯ ಮಾರಾಟ ಮಾಡಿ ಭರ್ಜರಿ ಕಮಾಯಿ ಮಾಡುತ್ತಿದ್ದಾರೆ. ಇದರಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಪಾಲಿದೆ ಎಂದು ಭೀಮ್ ಆರ್ಮಿ ಸಂಘಟನೆಯ ಕಾರ್ಯಕರ್ತರು ಆರೋಪ ಮಾಡುತ್ತಿದ್ದಾರೆ.

ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ಆದಾಯ ಬರುವ ಅಬಕಾರಿ ಇಲಾಖೆಯನ್ನೇ ವಂಚಿಸಿ ರಾಜಾರೋಷವಾಗಿ ಹೆಚ್ಚಿನ ಬೆಲೆಗೆ ಮದ್ಯವನ್ನು ಮಾರಾಟ ಮಾಡಲಾಗುತ್ತಿದೆ. ಇನಾದ್ರು ಬಸವನ ಬಾಗೇವಾಡಿ ಅಬಕಾರಿ ಇಲಾಖೆ ಅಧಿಕಾರಿಗಳು ಮದ್ಯದ ಶಾಪ್ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಂಡು ನಿಯಮ ಪಾಲಿಸುತ್ತಾರಾ ಎಂಬುದನ್ನು ನೋಡಬೇಕಿದೆ.ಈ ಸಂದರ್ಭದಲ್ಲಿ, ಎಸ್ ಎಸ್ ಕೆಂಪೇಗೌಡ್ರು, ರಿಯಾಜ ಡೋಣುರ, ಸದಾಶಿವ ಚಿಮ್ಮಲಗಿ, ಶಿವು ಅಂಗಡಗೇರಿ ಭೀಮ್ ಆರ್ಮಿ ಸಂಘಟನೆಯ ಕಾರ್ಯಕರ್ತರು ಇದ್ದರು.

# ಕೃಷ್ಣಾ ನದಿಯಲ್ಲಿ ಅಕ್ರಮ ಮರಳು ದಂಧೆ ಅಬ್ಬರ : ಅಧಿಕಾರಿಗಳ ಮೌನಕ್ಕೆ ಗ್ರಾಮಸ್ಥರ ಆಕ್ರೋಶ



**ಜಮಖಂಡಿ :ಏ.9:**ಕೃಷ್ಣಾ ನದಿ ಒಡಲು ಖಾಲಿಯಾಗುತ್ತಿದ್ದಂತೆಯೇ ತಾಲೂಕಿನ ನದೀತೀರ ಪ್ರದೇಶಗಳಲ್ಲಿ ಅಕ್ರಮ ಮರಳು ಮತ್ತು ಮಣ್ಣು ಗಣಿಗಾರಿಕೆ ಎಗ್ಗಿಲ್ಲದೆ ನಡೆಯುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಇದರಿಂದ ನದಿಯ ಸ್ವಾಭಾವಿಕ ಹರಿವು ಬದಲಾಗುವ ಸಾಧ್ಯತೆ ಇದೆ ಎಂದು ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ.

ತಾಲೂಕಿನ ವಿವಿಧ ಭಾಗಗಳಲ್ಲಿ ಮರಳು ಸಂಗ್ರಹಣೆ ಮತ್ತು ಸಾಗಾಣಿಕೆ ನಿರಂತರವಾಗಿ ನಡೆಯುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಮೌನಕ್ಕೆ ಶರಣಾಗಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ನದಿಯಲ್ಲಿ ಅತಿಯಾಗಿ ಮರಳು ತೆಗೆಯುವುದರಿಂದ ಭೂಕೊರೆತ ಉಂಟಾಗಿ ನದಿಪಾತ್ರ ಬದಲಾವಣೆಯ ಭೀತಿ ಇದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ, ಅಕ್ರಮ ಇಟ್ಟಿಗೆ ಭಟ್ಟಿಗಳು ಸಹ ಮಣ್ಣನ್ನು ಅಕ್ರಮವಾಗಿ ತೆಗೆದು ಬಳಸುತ್ತಿದ್ದು, ಈ ಕಾರ್ಯಾಚರಣೆಗಳ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲಾಗುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ. ಇದರಿಂದ ಪರಿಸರ ಹಾನಿ ಹೆಚ್ಚಾಗುತ್ತಿದೆ.

ಬೇಸಿಗೆಯ ತೀವ್ರತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನದಿಯಲ್ಲಿನ ನೀರಿನ ಮಟ್ಟವೂ ಕಡಿಮೆಯಾಗುತ್ತಿದ್ದು, ಉಳಿದಿರುವ ನೀರನ್ನು ಕುಡಿಯುವ ಉದ್ದೇಶಕ್ಕೆ ಬಳಸಿಕೊಳ್ಳಬೇಕಾದ ಪರಿಸ್ಥಿತಿ ಎದುರಾಗಿದೆ. ಆದರೆ ಮರಳು ಗಣಿಗಾರಿಕೆಯಿಂದ ನದಿಯಲ್ಲಿನ ಜಲಚರ ಪ್ರಾಣಿಗಳು ಸಾವನ್ನಪ್ಪುತ್ತಿದ್ದು, ನೀರು ಮಲಿನವಾಗುತ್ತಿದೆ ಎಂದು ಸ್ಥಳೀಯರು ದೂರಿದ್ದಾರೆ.

ಪ್ರತಿ ವರ್ಷ ಬೇಸಿಗೆಯಲ್ಲಿ ಹಿಪ್ಪರಗಿ ಬ್ಯಾರೇಜ್ ಕೆಳಭಾಗದಲ್ಲಿ ನೀರಿನ ಮಟ್ಟ ಕುಸಿಯುವುದು ಸಾಮಾನ್ಯ. ಈ ಸಮಯವನ್ನು ದುರುಪಯೋಗಪಡಿಸಿಕೊಂಡು ಕೆಲವರು ಭಾರಿ ವಾಹನಗಳ ಮೂಲಕ ಅಕ್ರಮ ಮರಳು ಸಾಗಾಣಿಕೆ ನಡೆಸುತ್ತಾರೆ. ಇದರಿಂದ ನದಿಯಲ್ಲಿ ಆಳವಾದ ಗುಂಡಿಗಳು ಉಂಟಾಗಿ, ಬಳಿಕ ನೀರು ಹರಿಸಿದಾಗ ಅವುಗಳಲ್ಲಿ ನೀರು ತುಂಬಿ ಮುಂದಿನ ಗ್ರಾಮಗಳಿಗೆ ನೀರು ತಲುಪದ ಸಮಸ್ಯೆ ಉಂಟಾಗುತ್ತದೆ. ಇದರಿಂದ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆ ಹೆಚ್ಚಾಗುತ್ತದೆ.

ಕೆಲವು ತಿಂಗಳುಗಳ ಹಿಂದೆ ಹಿಪ್ಪರಗಿ ಬ್ಯಾರೇಜ್‌ನ 22ನೇ ಗೇಟ್ ನೀರಿನ ರಭಸಕ್ಕೆ ಹಾನಿಗೊಳಗಾದ ಪರಿಣಾಮ ಈಗಾಗಲೇ ಅಪಾರ ಪ್ರಮಾಣದ ನೀರು ವ್ಯರ್ಥವಾಗಿದೆ. ಈ ಹಿನ್ನೆಲೆಯಲ್ಲಿ ಅಕ್ರಮ ಮರಳು ದಂಧೆಯನ್ನು ತಡೆಯಲು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಹಿಪ್ಪರಗಿ ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ತಹಸೀಲ್ದಾರ್ ಹಾಗೂ ಟಾಸ್ಕ್ ಫೋರ್ಸ್ ಸಮಿತಿ ಅಧಿಕಾರಿ ಅನೀಲ ಬಡಿಗೇರ ಅವರು, ನದೀತೀರದ ಗ್ರಾಮ ಪಂಚಾಯಿತಿ ಅಧಿಕಾರಿಗಳು ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿಗೆ ಅಕ್ರಮ ಮರಳು ಹಾಗೂ ಮಣ್ಣು ದಂಧೆ ನಡೆಯುವ ಸ್ಥಳಗಳಲ್ಲಿ ಕಟ್ಟುನಿಟ್ಟಿನ ನಿಗಾವಹಿಸಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

# ಎಲ್‌ಪಿಜಿ ಕೊರತೆಗೆ ಕೇಂದ್ರವೇ ಹೊಣೆ



**ಬೆಂಗಳೂರು, ಏ. 9-** ರಾಜ್ಯದಲ್ಲಿ ಎಲ್‌ಪಿಜಿ ಕೊರತೆಯಲ್ಲಿ ರಾಜ್ಯ ಸರ್ಕಾರದ ಪಾತ್ರ ಏನೂ ಇಲ್ಲ. ಪೆಟ್ರೋಲ್-ಡೀಸೆಲ್, ಗ್ಯಾಸ್ ಎಲ್ಲವೂ ಕೇಂದ್ರ ಸರ್ಕಾರಕ್ಕೆ ಸಂಬಂಧಪಟ್ಟದ್ದು. ಇದರಲ್ಲಿ ಏನಾದರೂ ವ್ಯತ್ಯಯಗಳಾದರೆ ಅದಕ್ಕೆ ಕೇಂದ್ರವೇ ಹೊಣೆ ಎಂದು ರಾಜ್ಯದ ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದರು.

ಆಟೋ ಚಾಲಕರು ಗ್ಯಾಸ್ ಸಿಗದಿದ್ದಕ್ಕೆ ರಾಜ್ಯ ಸರ್ಕಾರದ ಮೇಲೆ ಆಕ್ರೋಶಗೊಂಡಿರುವ ಬಗ್ಗೆ ಸುದ್ದಿಗೋಷ್ಠಿಯಲ್ಲಿಂದು ಪ್ರತಿಕ್ರಿಯಿಸಿದ ಅವರು, ಗ್ಯಾಸ್ ಕೊರತೆಯಲ್ಲಿ ನಮ್ಮ ಪಾತ್ರ ಇಲ್ಲ. ನಾವು ಕಾಳಸಂತೆಯಲ್ಲಿ ಮಾರಾಟವಾಗದಂತೆ ಏಜೆನ್ಸಿಗಳು ಸಮರ್ಪಕವಾಗಿ ಹಂಚಿಕೆ ಮಾಡದಿದ್ದರೆ ಅಂತಹ ವಿಚಾರಗಳ ಬಗ್ಗೆ ಗಮನ ಹರಿಸುತ್ತೇವೆ. ಗೃಹ ಸಚಿವರ ಜತೆ ಮಾತನಾಡಿದ್ದೇನೆ. ಕಾಳಸಂತೆ ಮಾರಾಟಕ್ಕೆ ಕಡಿವಾಣ ಹಾಕುವ ಕೆಲಸ ನಡೆದಿದೆ ಎಂದರು.

ಎಲ್‌ಪಿಜಿ ಸಮಸ್ಯೆಯಿಂದ ಸಂಕಷ್ಟಗಳು ಎದುರಾಗಿದ್ದು, ಆಟೋ ಚಾಲಕರು ಗ್ಯಾಸ್ ಸಿಗದೆ ಆಗಿರುವ ತೊಂದರೆಯನ್ನು ನಮ್ಮ ಗಮನಕ್ಕೆ ತಂದಿದ್ದಾರೆ. ನಾಳೆ ಅಧಿಕಾರಿಗಳ ಸಭೆ ಕರೆದಿದ್ದೇನೆ. ಕೇಂದ್ರಕ್ಕೂ ಎಲ್‌ಪಿಜಿ ಸಮರ್ಪಕ ಪೂರೈಕೆಗೆ ಆಗ್ರಹಿಸಿ ಪತ್ರ ಬರೆದಿದ್ದೇನೆ. ಇನ್ನು ಉತ್ತರ ಬಂದಿಲ್ಲ ಎಂದು ಹೇಳಿದರು.

ಅಕ್ಕಪಕ್ಕದ ರಾಜ್ಯಗಳಲ್ಲಿ ಎಲ್‌ಪಿಜಿ ಸಮಸ್ಯೆ ಇಲ್ಲ. ನಮ್ಮಲ್ಲೇ ಕೊರತೆ ಇರುವುದು. ಕೇಂದ್ರದಿಂದ ಮಲತಾಯಿ ಧೋರಣೆ ಆಗಿದೆ. ರಾಜ್ಯಕ್ಕೆ ಸಮರ್ಪಕವಾಗಿ ಎಲ್‌ಪಿಜಿ ಪೂರೈಕೆಯಾಗುತ್ತಿಲ್ಲ ಎಂದು ದೂರಿದರು.ಎಲ್‌ಪಿಜಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದಕ್ಕೆ ಕಡಿವಾಣ ಹಾಕುತ್ತಿದ್ದೇವೆ. ತೂಕ ಮತ್ತು ಅಳತೆ ಇಲಾಖೆಯ ಸಭೆಯನ್ನು ಕರೆದಿದ್ದೇನೆ. ಅವರಿಗೂ ಕಾಳಸಂತೆ ಮಾರಾಟಕ್ಕೆ ಬ್ರೇಕ್ ಹಾಕುವಂತೆ ಸೂಚನೆ ಕೊಟ್ಟಿದ್ದೇನೆ. ಜತೆಗೆ ಎಲ್ಲಾ ತೈಲ ಕಂಪೆನಿಗಳ ಮುಖ್ಯಸ್ಥರ ಸಭೆಯನ್ನು ನಾಳೆ ಕರೆದು ಚರ್ಚಿಸುತ್ತೇನೆ ಎಂದು ಅವರು ತಿಳಿಸಿದರು.

ರಾಜ್ಯದ ಹಲವೆಡೆ ಬಿಪಿಎಲ್ ರೇಷನ್ ಕಾರ್ಡ್‌ಗಳನ್ನು ತೆಗೆದು ಹಾಕಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅರ್ಹ ಬಿಪಿಎಲ್ ಕಾರ್ಡ್‌ದಾರರ ಕಾರ್ಡ್‌ಗಳನ್ನು ತೆಗೆದು ಹಾಕಿಲ್ಲ. ಅನರ್ಹ ಕಾರ್ಡ್‌ಗಳನ್ನು ರದ್ದು ಮಾಡಿದ್ದೇವೆ ಅಷ್ಟೇ ಎಂದು ಹೇಳಿದರು.

# ಪತ್ರಿಕಾ ಭವನದಲ್ಲಿ ಜರುಗಿದ ಸಮ್ಮೇಳನದ ಮಹಿಳಾ ಸಮಿತಿ ಸಭೆಮಹಿಳಾ ಪತ್ರಕರ್ತರ ಸ್ವಾಗತಕ್ಕೆ ಮೂರು ತಂಡಗಳ ರಚನೆ



**ಬೀದರ್:ಏ.9:** ಏ. 11 ಹಾಗೂ 12 ರಂದು ನಡೆಯಲಿರುವ ಪತ್ರಕರ್ತರ ರಾಜ್ಯ ಸಮ್ಮೇಳನಕ್ಕೆ ವಿವಿಧೆಡೆಯಿಂದ ಬರುವ ಮಹಿಳಾ ಪತ್ರಕರ್ತರನ್ನು ಬಸ್, ರೈಲು ನಿಲ್ದಾಣ ಹಾಗೂ ವಿಮಾನ ನಿಲ್ದಾಣಗಳಿಂದ ಸ್ವಾಗತಿಸಿ, ವಸತಿ ಗೃಹಕ್ಕೆ ಕರೆದೊಯ್ಯಲು ಸಮ್ಮೇಳನದ ಮಹಿಳಾ ಸಮಿತಿ ಮೂರು ಪ್ರತ್ಯೇಕ ತಂಡ ರಚಿಸುವ ನಿರ್ಧಾರ ಕೈಗೊಂಡಿದೆ. ಬಸವಣ್ಣನವರ ನಾಡಿಗೆ ಆಗಮಿಸುವ ಪತ್ರಕರ್ತೆಯರಿಗೆ ಯಾವುದೇ ರೀತಿಯ ಅನಾನುಕೂಲವಾಗದಂತೆ ನೋಡಿಕೊಳ್ಳಲು ಸಂಘದ ಅಧ್ಯಕ್ಷ ಆನಂದ ದೇವಪ್ಪಾ ಅವರ ಮಾರ್ಗದರ್ಶನದಲ್ಲಿ ಮಹಿಳಾ ಸಮಿತಿ ನಿರ್ಧರಿಸಿದೆ. ಈ ಹಿಂದೆ ಮಹಿಳಾ ಪತ್ರಕರ್ತೆಯರ ಸಂಖ್ಯೆ ಮಾಧ್ಯಮ ಲೋಕದಲ್ಲಿ ಕಡಿಮೆ ಇತ್ತು. ಇಂದು ಹತ್ತಾರು ಮಹಿಳೆಯರು ಕ್ರಿಯಾಶೀಲರಾಗಿ ಮಾಧ್ಯಮ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವುದನ್ನು ನೋಡಿ ಸಂತೋಷವಾಗಿದೆ. ಪತ್ರಕರ್ತರ ಸಂಘದ ಸದಸ್ಯರಲ್ಲದ ಕ್ರಿಯಾಶೀಲ ಮಹಿಳಾ ಪತ್ರಕರ್ತೆಯರು ಸಮ್ಮೇಳನಕ್ಕೆ ಕೈಜೋಡಿಸಿರುವುದು ಸಂತಸ ತಂದಿದೆ. ಎಂದು ಆನಂದ ದೇವಪ್ಪ ತಿಳಿಸಿದರು. ಇಂದು ನಡೆಯುವ ಬೈಕ್ ರ್ಯಾಲಿಯಲ್ಲಿ ಕೂಡಾ ನಗರದ ಮಹಿಳಾ ಪತ್ರಕರ್ತರು ಉತ್ಸಾಹದಿಂದ ಪಾಲ್ಗೊಳ್ಳಲಿದ್ದಾರೆ ಎಂದು ಅಪ್ಪಾರಾವ ಸೌದಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಮಹಿಳಾ ಸಮಿತಿಯ ಸಭೆಯಲ್ಲಿ ಸಮಿತಿಯ ಕೀರ್ತಿ ಸೇನಾ, ಪೂಜಾ ಪಿಟ್ಲೆ, ಸುಧಾರಾಣಿ ಜೆ, ಅಶ್ವಿನಿ ರೆಡ್ಡಿ, ಸುಷ್ಮಿತಾ ಮೋರೆ, ಪ್ರಿಯಂಕಾ ಶ್ರೀಗುರು, ಸೋನಿಕಾ, ವಿಜೇತಾ, ಮಹಾದೇವಿ ಇದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE